MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 272 | ಗುರುವಾರ : 14-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 272 | THURSDAY : 14-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಪಂಚಾಯತ್ ರಾಜ್ ತಿದ್ದುಪಡಿ ವಿಧೇಯಕತಿಂಗಳಲ್ಲಿ ಕಾನೂನು ಪ್ರಕ್ರಿಯೆಪೂರ್ಣ ಪ್ರಿಯಾಂಕ್



**ಬೆಂಗಳೂರು, ಆ.13–** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ಪ್ರಕರಣ–199 ಬಿ ಮತ್ತು 199 ಸಿ ಹೊಸ ಪ್ರಕರಣಗಳನ್ನು ಸೇರ್ಪಡೆ ಮಾಡಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ತಿದ್ದುಪಡಿ ವಿಧೇಯಕಕ್ಕೆ ವಿಧಾನಮಂಡಲದ ಅನುಮೋದನೆ ಪಡೆದು ರಾಜ್ಯಪಾಲರ ಒಪ್ಪಿಗೆಯನ್ನು ಪಡೆಯಲಾಗಿದ್ದು, ಈ ಅಧಿನಿಯಮದ ಕಾನೂನು ರೂಪಿಸುವ ಪ್ರಕ್ರಿಯೆ ಇನ್ನು ಒಂದೂವರೆ ತಿಂಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್, ಐಟಿ–ಬಿಟಿ ಸಚಿವ ಪ್ರಿಯಾಂಕ ಖರ್ಗೆ ವಿಧಾನಸಭೆಯಲ್ಲಿಂದು ಹೇಳಿದರು.

ಈ ತಿದ್ದುಪಡಿ ವಿಧೇಯಕಕ್ಕೆ ಕಾನೂನು ರೂಪಿಸುವ ಪ್ರಕ್ರಿಯೆ ವಿಳಂಬವಾದ ಕಾರಣ ಇ–ಸ್ವತ್ತು, ಬಿ ಖಾತೆ ನೀಡಿಕೆ ಪ್ರಕ್ರಿಯೆಗಳು ಆರಂಭವಾಗಲು ತಡವಾಗಿದೆ. ಈ ತಿದ್ದುಪಡಿ ವಿಧೇಯಕಕ್ಕೆ ನಿಯಮಗಳು ಅಂತಿಮಗೊಂಡ ನಂತರ ಇ–ಸ್ವತ್ತು ತಂತ್ರಾಂಶದ ಮೂಲಕ ನಮೂನೆ 11 ಬಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಪ್ರಶ್ನೋತ್ತರ ಅವಧಿಯಲ್ಲಿ ಸದಸ್ಯ ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಬಿಜೆಪಿಯ ದುರ್ಯೋಧನ ಐಹೊಳೆಯವರ ಪ್ರಶ್ನೆಗೆ ಉತ್ತರಿಸುತ್ತಾ ಹೇಳಿದರು.

ಪಂಚಾಯಿತ್ತಿಗಳಿಗೆ ಸ್ವಂತ ಇಂಧನ ಮೂಲಗಳನ್ನು(2ನೇಪುಟಕ್ಕೆ)

## ಕೈ ಶಾಸಕನಿಗೆ ಇಡಿ ಶಾಕ್



**ಕಾರವಾರ, ಆ. 13–** ಕಾಂಗ್ರೆಸ್ ಶಾಸಕ ಸತೀಶ್ ಸೈಲ್ ಅವರ ನಿವಾಸದ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಬೆಳ್ಳಂ ಬೆಳಿಗ್ಗೆ ದಾಳಿ ನಡೆಸಿದೆ. 6 ಮಂದಿ ಅಧಿಕಾರಿಗಳನ್ನೊಳಗೊಂಡ ತಂಡವು 4 ವಾಹನಗಳಲ್ಲಿ ಆಗಮಿಸಿದ್ದು, ಮನೆಯಲ್ಲಿ ದಾಖಲೆಗಳ ಪರಿಶೀಲನೆಯಲ್ಲಿ ತೊಡಗಿದ್ದಾರೆ ಎಂದು ಮೂಲಗಳು ತಿಳಿಸಿವೆ.ಜಾರಿನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿದ ಸಂದರ್ಭದಲ್ಲಿ ಶಾಸಕ ಸತೀಶ್ ಸೈಲ್ ಕುಟುಂಬದವರು ಮನೆಯಲ್ಲಿ ಇರಲಿಲ್ಲ. ಹೀಗಾಗಿ ಮನೆಯಲ್ಲಿರುವ ಕೆಲಸದಾಳುಗಳನ್ನು ವಿಚಾರಣೆ ನಡೆಸಿರುವ ಅಧಿಕಾರಿಗಳು ನಿವಾಸಕ್ಕೆ ಬರುವಂತೆ ಸತೀಶ್‌ಸೈಲ್ ಅವರಿಗೆ ಸಂದೇಶ ರವಾನೆಯಾಗಿದೆ. ಇಡಿ ಅಧಿಕಾರಿ ಕೇಶವ್ ನೇತೃತ್ವದಲ್ಲಿ 12 ಮಂದಿ ಅರೆಸೇನಾ ಸಶಸ್ತ್ರ ತಂಡದೊಂದಿಗೆ ದಾಳಿ ಮಾಡಲಾಗಿದೆ.ಮಲ್ಲಿಕಾರ್ಜುನ ಶಿಪ್ಪಿಂಗ್ ಕಂಪನಿ ಮೂಲಕ ಅದಿರು ಸಾಗಾಟ ನಡೆಸುತ್ತಿದ್ದ ಸತೀಶ್‌ಸೈಲ್ ಈ ಹಿಂದೆ ಅಕ್ರಮ ಅದಿರು ಸಾಗಾಟ ಪ್ರಕರಣಟಲ್ಲಿ ಜೈಲುಶಿಕ್ಷೆ ಅನುಭವಿಸಿದ್ದರು. ಈ ಕುರಿತು ಮಾಜಿ ಲೋಕಾಯುಕ್ತ ಸಂತೋಷ್‌ಹೆಗ್ಡೆ ನೇತೃತ್ವದ ತಂಡ ದೂರು ದಾಖಲಿಸಿತ್ತು.

## ಜಲಧಾರೆ ಯೋಜನೆಯಡಿಯಲ್ಲಿ ಟ್ಯಾಂಕ್ ನಿರ್ಮಾಣಕ್ಕೆ ಸ್ಥಳ ಪರಿಶೀಲನೆ: ಖಾಲೀದ್ ಅಹಮ್ಮದ್



ಯುವ ಮಾರ್ಗ ಸುದ್ದಿ

**ಮಾನ್ವಿ,ಆ.13–**ತಾಲೂಕಿನ ಕರಡಿಗುಡ್ಡ ಗ್ರಾಮದಲ್ಲಿನ ಜನರಿಗೆ ಶುದ್ದವಾದ ನೀರು ಪೂರೈಸುವುದಕ್ಕೆ ಅಗತ್ಯವಾದ ಟ್ಯಾಂಕ್ ನಿರ್ಮಾಣಕ್ಕೆ ಅಗತ್ಯವಾದ ಸೂಕ್ತ ಸ್ಥಳವನ್ನು ತಾ.ಪಂ. ಇ.ಓ.ಖಾಲೀದ್ ಅಹಮ್ಮದ್ ಪರಿಶೀಲಿಸಿ ಮಾತನಾಡಿ ಗ್ರಾಮದ ಪ್ರತಿ ಮನೆಗೆ ಅಗತ್ಯವಾದ ಶುದ್ದವಾದ ಕುಡಿಯುವ ನೀರನ್ನು ಪೂರೈಸುವುದಕ್ಕೆ ಸರ್ಕಾರವು ಜಲಧಾರೆ ಯೋಜನೆಯಡಿಯಲ್ಲಿ ಪ್ರತಿ ಮನೆಗೂ ನಳ ಸಂಪರ್ಕ ನೀಡಿ ನೀರು ಪೂರೈಸುವುದಕ್ಕೆ ಅಗತ್ಯವಿರುವ ಟ್ಯಾಂಕ್ ಅನ್ನು ಗ್ರಾಮದಲ್ಲಿ ನಿರ್ಮಾಣ ಮಾಡಲಾಗುವುದು ಎಂದು ತಿಳಿಸಿದರು

ಗ್ರಾಮದಲ್ಲಿನ ಎರಡು ಸ್ಥಳಗಳನ್ನು ಗುರುತಿಸಿ ಗ್ರಾಮದ ಮುಖಂಡರೊಂದಿಗೆ ಗ್ರಾ.ಪಂ.ಸದಸ್ಯರೊಂದಿಗೆ ಹಾಗೂ ಜಲಧಾರೆ ಯೋಜನೆಯ ಅಧಿಕಾರಿ ಗಳೊಂದಿಗೆ ಚರ್ಚೆ ನಡೆಸಿದರು.

ಸಂಗಾಪೂರ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹಸರ್ ಜಬೀನ ಖಾನಂ ಸೇರಿದಂತೆ ಗ್ರಾ.ಪಂ. ಸಿಬ್ಬಂದಿಗಳು ಇದ್ದರು.

## ಅಂಗನವಾಡಿಗಳಲ್ಲಿ ಮೂಲ ಸೌಕರ್ಯಗಳನ್ನು ಪರಿಶೀಲಿಸಿ: ಜಿಪಂ ಸಿಇಓ ಈಶ್ವರ ಕುಮಾರ ಸೂಚನೆ

ಯುವ ಮಾರ್ಗ ಸುದ್ದಿ

**ರಾಯಚೂರು,ಆ.13–**ಜಿಲ್ಲೆಯ ಅಂಗನವಾಡಿ ಕೇಂದ್ರಗಳಿಗೆ ಕಾಲ–ಕಾಲಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಬೇಕು. ಅಂಗನವಾಡಿಯ ಕಾರ್ಯಕರ್ತರ ಹಾಜರಾತಿ, ಮಕ್ಕಳಿಗೆ ನೀಡುವ ಪೌಷ್ಟಿಕ ಆಹಾರ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಂಗಳವಾರ ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಚೇರಿಯ ಸಭಾಂಗಣದಲ್ಲಿ ಜರುಗಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಬಾಲ್ಯ ವಿವಾಹ ತಡೆಗಟ್ಟಲು ಅಗತ್ಯ ಕ್ರಮವಹಿಸಬೇಕು. 14 ರಿಂದ 18 ವರ್ಷದ ಯುವತಿಯರಿಗೆ ಕೌಶಲ ತರಬೇತಿ ನೀಡಿ ಉದ್ಯೋಗ ಅವಕಾಶ ಮಾಡಿದರೆ ಅನುಕೂಲವಾಗಲಿದ್ದು,



ಈ ತರಬೇತಿ ಕಾರ್ಯಕ್ರಮದಡಿ ತಾಲೂಕು ಮಟ್ಟದಲ್ಲಿ ಸಂವಾದ ಕಾರ್ಯಕ್ರಮವನ್ನು ಏರ್ಪಡಿಸಿ ಗ್ರಾಮೀಣ ನಿರುದ್ಯೋಗ ಯುವತಿಯರಿಗೆ ಉದ್ಯೋಗ ದೊರಕಿಸಬೇಕೆಂದರು.

ಜಿಲ್ಲೆಯಲ್ಲಿ ಬಾಲ್ಯ ವಿವಾಹ ಮತ್ತು ಪೋಕ್ಸೋ ಅಪರಾಧಗಳು ಕಂಡುಬಂದಲ್ಲಿ ಸೂಕ್ತ ಕ್ರಮಕೈಗೊಳ್ಳಬೇಕು. ಬಾಲ್ಯ ವಿವಾಹ ಮತ್ತು ಪೋಕ್ಸೋ ಪ್ರಕರಣಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಬೀದಿ ನಾಟಕಗಳು ಮತ್ತು ಜಾಗೃತ ಕಾರ್ಯಕ್ರಮಗಳನ್ನು ಹೆಚ್ಚಾಗಿ ಆಯೋಜನೆ ಮಾಡಬೇಕು. ಬಾಲ್ಯ ವಿವಾಹಗಳ ಬಗ್ಗೆ ನಿಗಾವಹಿಸಿ ತಡೆಗಟ್ಟಲು ಮಾರ್ಗಸೂಚಿಗಳನ್ನು ರೂಪಿಸಬೇಕು. ಸಾರ್ವಜನಿಕರ ಸಹಕಾರ ಪಡೆದು ಗ್ರಾಮ ಪಂಚಾಯಿತಿಯ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಜಿಲ್ಲೆಯ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಹಾಜರಾತಿಯು ಕಡ್ಡಾಯವಾಗಿ ಇರುವಂತೆ ನೋಡಿಕೊಳ್ಳಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸಿಇಓ ಅವರು ಸೂಚನೆ ನೀಡಿದರು.

ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್ ಅವರು ಮಾತನಾಡಿ, ಶಾಲಾ ಶಿಕ್ಷಕರು ಮತ್ತು (2ನೇಪುಟಕ್ಕೆ)

## ಬೀದಿ ನಾಯಿಗಳ ಹಾವಳಿ ರಾಜ್ಯದಲ್ಲೂ ಸುಪ್ರೀಂ ಆದೇಶ ಪಾಲನೆಗೆ ಮನವಿ



**ಬೆಂಗಳೂರು, ಆ.13–** ಬೆಂಗಳೂರಿನಲ್ಲಿ ಮಿತಿ ಮೀರಿರುವ ಬೀದಿನಾಯಿಗಳ ಹಾವಳಿ ವಿಧಾನಸಭೆಯಲ್ಲಿಂದು ಪ್ರಸ್ತಾಪವಾಗಿ ಸ್ವಾರಸ್ಯಕರ ಚರ್ಚೆಗೂ ಕಾರಣವಾಯಿತು.

ಶೂನ್ಯ ವೇಳೆಯ ಆರಂಭಕ್ಕೂ ಮೊದಲೇ ಜೆಡಿಎಸ್‌ನ ಸುರೇಶ್‌ಬಾಬು ಅವರು ಎದ್ದು ನಿಂತು ಬೀದಿ ನಾಯಿ ನಿಯಂತ್ರಣ ಸಂಬಂಧ ಸುಪ್ರೀಂ ಕೋರ್ಟ್ ಹೊರಡಿಸಿರುವ ಆದೇಶವನ್ನು ರಾಜ್ಯದಲ್ಲೂ ಪಾಲಿಸಲು ಸರ್ಕಾರಕ್ಕೆ ಸೂಚನೆ ಕೊಡಿ ಎಂದು ಸಭಾಧ್ಯಕ್ಷರಲ್ಲಿ ಮನವಿ ಮಾಡಿ, ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ನಾಯಿ ದಾಳಿಗೆ ಹಲವರು ಬಲಿಯಾಗುತ್ತಿದ್ದಾರೆ ಎಂದಾಗ, ಸಭಾಧ್ಯಕ್ಷ ಯು.ಟಿ. ಖಾದರ್ ವಿಧಾನಸೌಧದಲ್ಲೂ ನಾಯಿಗಳ ಹಾವಳಿ ಇದೆ ಎಂದು ಹೇಳಿದ್ದು ಸ್ವಾರಸ್ಯಕರ ಚರ್ಚೆಗೆ ಅನುವು ಮಾಡಿಕೊಟ್ಟಿತು.

ಬಿಜೆಪಿಯ ಸುರೇಶ್‌ಕುಮಾರ್ 2 ಲಕ್ಷ ನಾಯಿ ಕಡಿತ ಪ್ರಕರಣಗಳು ವರದಿಯಾಗಿವೆ. ಬೆಂಗಳೂರಿನಲ್ಲಿ 18 ಜನ ರೇಬಿಸ್‌ಗೆ ಬಲಿಯಾಗಿದ್ದಾರೆ. ಬೀದಿ ನಾಯಿಗಳ ನಿಯಂತ್ರಣ ಅವಶ್ಯವಾಗಿದೆ. ಸುಪ್ರೀಂ ಕೋರ್ಟ್ ಮೂರು ನಗರಗಳಿಗೆ ಆದೇಶ ಕೊಟ್ಟಿದೆ. ಇದನ್ನು ಬೆಂಗಳೂರಿಗೂ ವಿಸ್ತರಿಸಬೇಕು ಎಂದರು.

ಇದಕ್ಕೆ ದನಿಗೂಡಿಸಿದ ಬಿಜೆಪಿಯ ಡಾ. ಸಿ.ಎನ್. ಅಶ್ವತ್ಥ್‌ನಾರಾಯಣ ಬೀದಿ ನಾಯಿಗಳಿಂದ ತೊಂದರೆಯಾಗುತ್ತಿದೆ. ಈ ಬೀದಿ ನಾಯಿಗಳನ್ನು ನಾಯಿಗಳ ಪ್ರೇಮಿಗಳ ಮನೆಗೆ ಬಿಟ್ಟುಬಿಡಿ. ಬೀದಿಯಲ್ಲಿ ಇರುವ ನಾಯಿಗಳನ್ನು ಹಿಡಿದು ಹಾಕಿ, ಇದು ಬಹಳ ಗಂಭೀರ ಪ್ರಕರಣ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸುಪ್ರೀಂ ಕೋರ್ಟ್ ಆದೇಶವನ್ನು ಉಲ್ಲೇಖಿಸಿ, ನಾಯಿಗಳ ನಿಯಂತ್ರಣ ಸಂಬಂಧ ಸಹಾನುಭೂತಿಯಿಂದ ಮಾತನಾಡಿದ್ದಾರೆ. ಬಿಎಂಪಿಗೆ ಬೀದಿ ನಾಯಿಗಳ ಹಾವಳಿ ನಿಯಂತ್ರಿಸಲು ಸೂಚನೆ ಕೊಡಿ, ಬೀದಿ ನಾಯಿಗಳಿಗೆ ಆಹಾರ ಕೊಡುವ ಬದಲು ಅವುಗಳನ್ನು ಹಿಡಿಯಿರಿ ಎಂದು ಬಿಜೆಪಿಯ ಸುನೀಲ್‌ಕುಮಾರ್ ಹೇಳಿದರು.

ಸುಪ್ರೀಂ ಕೋರ್ಟ್ ತೀರ್ಪು ರಾಜ್ಯದಲ್ಲೂ ಅನುಷ್ಠಾನ ಮಾಡಬೇಕು ಎಂದು ಬಿಜೆಪಿಯ ಹಲವು ಸದಸ್ಯರು ಒತ್ತಾಯಿಸಿದರು. ಆಗ ಸಭಾಧ್ಯಕ್ಷ ಯು.ಟಿ.(2ನೇಪುಟಕ್ಕೆ)

## ಆಶ್ರಯ ನಿವಾಸಿಗಳಿಗೆ ದಾರಿ ಕಲ್ಪಿಸಲು ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಅಗ್ರಹಿಸಿ ಅಹೋರಾತ್ರಿ ಧರಣಿ




ಯುವ ಮಾರ್ಗ ಸುದ್ದಿ

**ಮಾನ್ವಿ,ಆ.13–**ತಾಲೂಕಿನ ತಡಕಲ್ ಗ್ರಾಮದ ಸ.ನಂ.8 ರಲ್ಲಿ ಸರಕಾರದ ವತಿಯಿಂದ 52 ಕ್ಕೂ ಹೆಚ್ಚು ಕುಟುಂಬಗಳಿಗೆ ಆಶ್ರಯ ಮನೆಗಳನ್ನು ಸುಮಾರು 20–22 ವರ್ಷಗಳಿಂದ ಮನೆಗಳನ್ನು ನಿರ್ಮಿಸಲಾಗಿದೆ.

ಆದರೆ ಆಶ್ರಯ ಮನೆಯ ನಿವಾಸಿಗಳಿಗೆ ಸರಿಯಾದ ರಸ್ತೆ ಹಾಗೂ ಹಕ್ಕು ಪತ್ರ ವಿತರಣೆ, ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಬುಧವಾರ ತಾಲೂಕಾ ಸಿಪಿಐಎಂಎಲ್ ವತಿಯಿಂದ ತಾಲೂಕಾ ಪಂಚಾಯತ್ ಅವರಣದಲ್ಲಿ ಅಹೋರಾತ್ರಿ ಧರಣಿ ನಡೆಸಿದರು.

ಸಿಪಿಐಎಂ ಎಲ್ ತಾಲೂಕಾ ಕಾಯರ್ದರ್ಶಿ ಯಲ್ಲಪ್ಪ ಉಟಕನೂರು ಮಾತನಾಡಿ ಆಶ್ರಯ ಮನೆಗಳಿಗೆ ಹೋಗಬೇಕಾದರೆ ವಯಸ್ಕರಿಗೆ, ವಿದ್ಯಾಭ್ಯಾಸ ಮಾಡುವ ವಿದ್ಯಾರ್ಥಿಗಳಿಗೆ, ಮಹಿಳೆಯರು ತಿರುಗಾಡಲು ತೊಂದರೆಯಾಗುತ್ತಿದೆ. ಹಾಗೂ ಅಕ್ಕ ಪಕ್ಕದ ಜಮೀನಿನ ಮಾಲೀಕರು ತಮ್ಮ ಜಮೀನಿನ ಮುಖಾಂತರ ಹಾದು ಹೋಗಲು ನಿರಾಕರಿಸುತ್ತಿದ್ದಾರೆ. ಇದರಿಂದ ಸುಮಾರು 52 ಕುಟುಂಬಗಳಿಗೆ ದಾರಿ ಇಲ್ಲದರಿಂದ ನಿತ್ಯ ಕಷ್ಟದಲ್ಲಿರುತ್ತಾರೆ.

ಪತ್ರಿನಿತ್ಯ ಬಡ ಕೂಲಿ ಕಾರ್ಮಿಕರು ಇದ್ದು ನಿತ್ಯ ಕೂಲಿ ಕಸಬು ಮಾಡಿಕೊಂಡು ಉಪಜೀವಿಸುತ್ತಿದ್ದು ನಿತ್ಯ ತಿರುಗಾಡಲು ರಸ್ತೆಯ ಅತ್ಯವಶ್ಯಕತೆ ಇರುತ್ತದೆ. ಹಾಗೂ ವಿಶೇಷವಾಗಿ ರೋಗಿಗಳಿಗೆ ಮತ್ತು ಗರ್ಭಿಣಿ ಮಹಿಳೆಯರಿಗೆ ಕಷ್ಟದ ಸಮಯದಲ್ಲಿ ಆಸ್ಪತ್ರೆಗೆ ಹೋಗಲು ತೊಂದರೆ ಅನುಭವಿಸುತ್ತಿದ್ದಾರೆ. ಈ ಸಂಬಂಧ ಸಾಕಷ್ಟು ಭಾರಿ ಮೌಖಿಕವಾಗಿ ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದರು ಯಾವುದೇ ಪ್ರಯೋಜನ ಆಗಿರುವುದಿಲ್ಲ.

ಅದೇ ರೀತಿ ವಿವಿಧ ಬೇಡಿಕೆಗಳಾದ ಪೋತ್ನಾಳ ಸರ್ಕಾರಿ ಅಸ್ಪತ್ರೆಯಲ್ಲಿ ಈ ಕೂಡಲೇ ವೈದ್ಯಾಧಿಕಾರಿಗಳನ್ನು ಕೂಡಲೇ ನೇಮಕ ಮಾಡಬೇಕು.ಉಟಕನೂರು ,ಪೋತ್ನಾಳ ಗ್ರಾಮ ಪಂಚಾಯಿತಿಯಲ್ಲಿ ಜೆ.ಜೆ.ಎಂ ಯೋಜನೆಯ ಕಾಮಗಾರಿಯನ್ನು ತಖಿಖೆಗೂಳಪಡಿಸ ಬೇಕು, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಬೇಕು.

ತಹಸೀಲ್ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಸರಿಯಾದ ಸಮಯಕ್ಕೆ ತಮ್ಮ ಕೆಲಸಗಳನ್ನು ನಿರ್ವಹಿಸುವಂತೆ ಸೂಚಿಸಬೇಕು. ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ 15 ನೇ ಹಣಕಾಸು ಯೋಜನೆ (2ನೇಪುಟಕ್ಕೆ)

## ಸ್ವಚ್ಛ, ಸುಂದರ ನಗರವಾಗಿಸಲು ಪ್ರಾಮಾಣಿಕ ಪ್ರಯತ್ನ ನಡೆಸಿ: ಪಾಲಿಕೆ ಆಯುಕ್ತ ಜುಬೀನ್ ಸಲಹೆ

ಯುವ ಮಾರ್ಗ ಸುದ್ದಿ

**ರಾಯಚೂರು,ಆ.13–**ಸ್ವಚ್ಛ ಭಾರತ್ ಮಿಷನ್ 2.0 ಯೋಜನೆಯ ವಿವಿಧ ಘಟಕಗಳಲ್ಲಿ ಸರಿಯಾಗಿ ಕಾರ್ಯನಿರ್ವಹಿಸಬೇಕು. ರಾಯಚೂರು ನಗರವನ್ನು ಸ್ವಚ್ಛ ಹಾಗೂ ಸುಂದರವಾಗಿಸಲು ಪ್ರಾಮಾಣಿಕ ಪ್ರಯತ್ನ ಮಾಡಬೇಕೆಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ ಅವರು ಹೇಳಿದರು.

ಬುಧವಾರ ದಂದು ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಸ್ವಚ್ಛ ಭಾರತ ಅಭಿಯಾನ 2.0 ಅಡಿ ಐಇಸಿ ಚಟುವಟಿಕೆಗಳ ಕುರಿತು ಸಮುದಾಯ ಸಂಚಾಲಕರ ಹುದ್ದೆಗೆ ಆಯ್ಕೆಯಾದ ಸ್ವಸಹಾಯ ಗುಂಪುಗಳ ಸದಸ್ಯರಿಗೆ ಕಾರ್ಯಾದೇಶ ಪ್ರಮಾಣ ಪತ್ರ ಹಾಗೂ ಗುರುತಿನ ಚೀಟಿ ನೀಡಿ ಅವರು ಮಾತನಾಡಿದರು.

ಸಹಕಾರ ಸಂಘದ ಸದಸ್ಯರು ಸದಸ್ಯರೊಂದಿಗೆ ಕೆಲಸ ಮಾಡುವುದು ಸಾಮಾನ್ಯ ವಿಚಾರವಲ್ಲ. ಸರ್ಕಾರಿ ಕೆಲಸ ದೇವರ ಕೆಲಸ ಎಂದು ಭಾವಿಸಿ, ತಮ್ಮ ಕರ್ತವ್ಯವನ್ನು



ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಪಾಲಿಕೆಯ ವಿವಿಧ ತೆರಿಗೆ ಅಚ್ಚುಕಟ್ಟಾಗಿ ವಸೂಲಿ ಮಾಡಬೇಕು. ಒಂದೊಂದು ರೂಪಾಯಿಯನ್ನು ಜೋಡಿಸಿ ದೊಡ್ಡ ಕೆಲಸಗಳನ್ನು ಪಾಲಿಕೆಯಿಂದ ಮಾಡಬಹುದಾಗಿದೆ ಎಂದರು.

ಪಾಲಿಕೆಯ ಅಭಿವೃದ್ಧಿ ವಿಷಯದಲ್ಲಿ ಸಹಕಾರ ಸಂಘದ ಸದಸ್ಯರ ಪಾತ್ರ ಮಹತ್ವದ್ದಾಗಿದೆ. ತಾವು ಶಿಕ್ಷಣವಂತರಾಗಿದ್ದು, ಕಂಪ್ಯೂಟರ್ ಜ್ಞಾನ ಪಡೆಯಬೇಕು. ಸರ್ಕಾರಿ ಸಿಬ್ಬಂದಿಯಂತೆ ಕೆಲಸ ಕಾರ್ಯಗಳನ್ನು ಮಾಡಬೇಕು. ಸಂಬಂಧಿಸಿದ ವಿಭಾಗದ ಮುಖ್ಯಸ್ಥರ ಸಲಹೆಗಳನ್ನು ಪಡೆದು ಸಮಾಜವನ್ನು ಬದಲಾವಣೆ ಮಾಡಲು ಶ್ರಮಿಸಬೇಕೆಂದರು.

ಪಾಲಿಕೆಯ ವಾರ್ಡ್ ಮಟ್ಟದ ವಿವರಗಳು ಮತ್ತು ಮೂಲಸೌಕರ್ಯಗಳ ಸಮೀಕ್ಷೆಯನ್ನು ನಡೆಸುವ ಮೂಲಕ ತಳಮಟ್ಟದ ಸಮೀಕ್ಷೆ ನಡೆಸಬೇಕು. ತ್ಯಾಜ್ಯವನ್ನು ಮೂಲದಲ್ಲೇ ವಿಂಗಡಿಸಬೇಕು. ದೊಡ್ಡ ಪ್ರಮಾಣದಲ್ಲಿ ತ್ಯಾಜ್ಯವನ್ನು ಉತ್ಪಾದಿಸುವಲ್ಲಿ ನಿಯಮಗಳ ಪಾಲನೆ, ಒಣ ಮತ್ತು ಹಸಿ ತ್ಯಾಜ್ಯದ ಸಂಸ್ಕರಣೆ ಮಾಡಬೇಕು. (2ನೇಪುಟಕ್ಕೆ)

## ಮೊದಲನೇಯ ಪುಟದಿಂದ

### ಪಂಚಾಯತ್ ರಾಜ್ ತಿದ್ದುಪಡಿ ವಿಧೇಯಕತಿಂಗಳಲ್ಲಿ ಕಾನೂನು ಪ್ರಕ್ರಿಯೆಪೂರ್ಣ ಪ್ರಿಯಾಂಕ್

ಸೃಷ್ಟಿಸಲು ಸರ್ಕಾರ ಆಯವ್ಯಯದಲ್ಲಿ ಮೈಕ್ರೋಗ್ರೆಡ್ ಯೋಜನೆಯನ್ನು ಅನುಷ್ಠಾನ ಮಾಡಿದೆ. ಪ್ರಾಯೋಗಿಕವಾಗಿ ಕಲ್ಯಾಣ ಕರ್ನಾಟಕದ 2 ಕಡೆ ಈ ಯೋಜನೆ ಅನುಷ್ಠಾನಕ್ಕೆ ಟೆಂಡರ್ ಕರೆದಿದ್ದೇವೆ. ಈ ಯೋಜನೆ ಯಶಸ್ವಿಯಾದರೆ ಎಲ್ಲ ಕಡೆಯೂ ಯೋಜನೆಯನ್ನು ವಿಸ್ತರಿಸುತ್ತೇವೆ.

ಇದರಿಂದ ಪಂಚಾಯ್ತಿಗಳಿಗೆ ವಿದ್ಯುತ್ ಕೊರತೆ ಸಮಸ್ಯೆ ಕಾಡುವುದಿಲ್ಲ. ಸೌರಶಕ್ತಿ ಮೂಲಕ ವಿದ್ಯುತ್ ಉತ್ಪಾದಿಸಿಕೊಳ್ಳಲು ಅವಕಾಶವಾಗಲಿದೆ ಎಂದು ಅವರು ಹೇಳಿದರು.

ಇ–ಖಾತೆ ವಿತರಣೆಯ ಸಂಬಂಧ ಇಂಟರ್‌ನೆಟ್ ಹಾಗೂ ಸರ್ವರ್ ಸಮಸ್ಯೆಗಳು ಇರುವ ಕಡೆ ಎಲ್ಲವನ್ನೂ ಸರಿಪಡಿಸುವ ಕೆಲಸ ನಡೆದಿದೆ. ಇನ್ನೊಂದು ತಿಂಗಳಲ್ಲಿ ತಾಂತ್ರಿಕವಾಗಿ ಮೇಲ್ದರ್ಜೆಗೇರಿಸುವ ಕಾರ್ಯಗಳು ನಡೆಯಲಿದ್ದು, ಇದೆಲ್ಲ ಆದರೆ ಇ–ಸ್ವತ್ತು ವಿತರಣೆ ಮತ್ತು 11 ಬಿ ಖಾತೆ ವಿತರಣೆಯ ಸಮಸ್ಯೆಗಳು ಪರಿಹಾರವಾಗಲಿವೆ ಎಂದು ಅವರು ತಿಳಿಸಿದರು.

ದಿಶಾಂಕ್ ಆಪ್ ವ್ಯವಸ್ಥೆ ಉತ್ತಮವಾಗಿ ಕೆಲಸ ಮಾಡುತ್ತಿದೆ. ಇ–ಸ್ವತ್ತು ಸುಧಾರಣೆ ಸಂಬಂಧವೂ ಸಮಿತಿಯನ್ನು ರಚಿಸಲಾಗಿದೆ ಎಂದು ಅವರು ಹೇಳಿದರು.

ಪಂಚಾಯತ್ ರಾಜ್ ತಿದ್ದುಪಡಿ ವಿಧೇಯಕಕ್ಕೆ ಕಾನೂನು ರೂಪಿಸಿ ಅದು ಜಾರಿಯಾದ ನಂತರ ಪಂಚಾಯ್ತಿ ಮಟ್ಟದಲ್ಲಿರುವ ಇ–ಸ್ವತ್ತು, 11 ಬಿ ಖಾತಾ ವಿತರಣೆ ಎಲ್ಲ ಸಮಸ್ಯೆಗಳಿಗೂ ಪರಿಹಾರ ಸಿಗಲಿದೆ ಎಂದು ಅವರು ಹೇಳಿದರು.

### ಆಶ್ರಯ ನಿವಾಸಿಗಳಿಗೆ ದಾರಿ ಕಲ್ಪಿಸಲು ಹಾಗೂ ವಿವಿಧ ಬೇಡಿಕೆಗಳ ಈಡೇರಿಕೆಗೆ ಅಗ್ರಹಿಸಿ ಅಹೋರಾತ್ರಿ ಧರಣಿ

ಅನುದಾನವನ್ನು ತನಿಖೆ ಮಾಡಬೇಕು. ತಾಪಂ ನಿರ್ವಾಹಕ ಅಧಿಕಾರಿ ಖಾಲೀದ್ ಅಹ್ಮದ್ ಸೇವೆಯಿಂದ ವಜಾಗೂಳಿಸುಬೇಕು ಹಾಗೂ ವಿವಿಧ ಬೇಡಿಕೆಗಳನ್ನುಈಡೇರಿಸುವಂತೆ ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ  ಪ್ರಕಾಶ ತಡಕಲ್, ಪ್ರಕಾಶ ದೋತರಬಂಡಿ, ಸಣ್ಣ ಹುಲಿಗಪ್ಪ ಹರಿಜನ, ಶಿವರಾಜ ಯಾದವ ,ನಾಗರಾಜ ನಾಯಕ, ರಮೇಶ ನಾಯಕ, ದೂಡ್ಡ ಹುಸೇನಿ ಹರಿಜನ, ತಿಪ್ಪಣ್ಣ ಭಜಂತ್ರಿ, ಅಂಬಮ್ಮ ನಾಯಕ, ರೇಣಮ್ಮ ಮಡಿವಾಳ, ಹನುಮಂತ ಹರಿಜನ, ಮಲ್ಲಯ್ಯ ಮಡಿವಾಳ,ಮರಿಯಪ್ಪ ಹರಿಜನ, ಬಸ್ಸಪ್ಪ ಚಲುವಾದಿ ಇತರರು ಇದ್ದರು.

### ಅಂಗನವಾಡಿಗಳಲ್ಲಿ ಮೂಲ ಸೌಕರ್ಯಗಳನ್ನು ಪರಿಶೀಲಿಸಿ: ಜಿಪಂ ಸಿಇಓ ಈಶ್ವರ ಕುಮಾರ ಸೂಚನೆ

ಅಂಗನವಾಡಿ ಕಾರ್ಯಕರ್ತೆಯರು ಗ್ರಾಮಗಳಲ್ಲಿಯೇ ಇರುವುದರಿಂದ ಬಾಲ್ಯ ವಿವಾಹಗಳ ಬಗ್ಗೆ ಪತ್ತೆ ಹಚ್ಚಿ ಕಾರ್ಯಪಡೆಗೆ ಸಕಾಲಕ್ಕೆ ಮಾಹಿತಿ ಒದಗಿಸಲು ಕಾಳಜಿ ವಹಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳು ಮತ್ತು ಪೋಷಣ್ ಟ್ರ್ಯಾಕರ್ ತಂತ್ರಾಂಶದಲ್ಲಿ ಫಲಾನುಭವಿಗಳ ಆಧಾರ್ ಸೀಡಿಂಗ್ 2025ರ ಜುಲೈ ಅಂತ್ಯಕ್ಕೆ ಒಟ್ಟು 2,42,482 ಫಲಾನುಭವಿಗಳಿದ್ದು, 2,42,457 ಆಧಾರ್ ವೇರಿಫೈಡ್ ಮಾಡಲಾಗಿದೆ. ಇನ್ನೂ 25 ವೇರಿಫೈಡ್ ಬಾಕಿ ಉಳಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು.

ಪೋಷಣೆ ಅಭಿಯಾನ ಯೋಜನೆ ಸರಿಯಾಗಿ ಅನುಷ್ಠಾನಗೊಳಿ: ಜಿಲ್ಲೆಯಲ್ಲಿ ಪೋಷಣಾ ಅಭಿಯಾನ ಯೋಜನೆಯಡಿ ಅಂಗನವಾಡಿ ಕೇಂದ್ರಗಳಿಗೆ ವಿತರಸಲಾದ ಗ್ರೋಥ್ ಮಾನಿಟರಿಂಗ್ ಮಾಪನಗಳ ಮಾಹಿತಿ ನೀಡುವಲ್ಲಿ ಹೆಚ್ಚಿನ ಗಮನಹರಿಸಬೇಕು. ಜಿಲ್ಲೆಯಲ್ಲಿರುವ ಅಂಗನವಾಡಿ ಕೇಂದ್ರಗಳು ಮತ್ತು ಫಲಾನುಭವಿಗಳ ಆಧಾರ್ ಸೀಡಿಂಗ್ ಮಾಹಿತಿ ಸರಿಯಾದ ರೀತಿಯಲ್ಲಿ ನೀಡಬೇಕು. ಜಿಲ್ಲೆಯಲ್ಲಿರುವ ಒಟ್ಟು ಫಲಾನುಭವಿಗಳ ಮೊಬೈಲ್ ಸಂಖ್ಯೆ ಪರಿಶೀಲಿಸಿ ಮಾಹಿತಿ ನೀಡಬೇಕು. ಪೋಷಣ್ ಟ್ರ್ಯಾಕರ್ ನಲ್ಲಿ ದೈನಂದಿನ ಚಟುವಟಿಕೆಯ ಮಾಹಿತಿಯು ಸಹ ಅಧಿಕಾರಿಗಳಿಗೆ ಸಲ್ಲಿಸಬೇಕು. ಪೋಷಣ್ ಟ್ರ್ಯಾಕರ್‌ನಲ್ಲಿ ಫಲಾನುಭವಿಗಳನ್ನು 0–6 ವರ್ಷದ ಮಕ್ಕಳ ತೂಕ ಮತ್ತು ಎತ್ತರ ಮಾಡಬೇಕು. ಹದಿಹರೆಯದ ಕಿಶೋರಿಯರ ತೂಕ ಮತ್ತು ಎತ್ತರ ಅಳವಡಿಸಿರುವ ಮಾಹಿತಿ, ಪೋಷಣ್ ಟ್ರ್ಯಾಕರ್ ತಂತ್ರಾಂಶದಲ್ಲಿ ಫಲಾನುಭವಿಗಳ ಮನೆ ಭೇಟಿ ಮಾಹಿತಿ ನೀಡಿ ಜಿಲ್ಲೆಯಲ್ಲಿ ಪೋಷಣೆ ಅಭಿಯಾನ ಯೋಜನೆಯನ್ನು ಸರಿಯಾಗಿ ಅನುಷ್ಠಾನಗೊಳಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಹಲವಾರು ಯೋಜನೆಗಳಾದ ಮಿಶನ್ ಶಕ್ತಿ ಯೋಜನೆ, ಬೇಟಿ ಬಚಾವೋ ಬೇಟಿ ಪಡಾವೋ ಅಭಿಯಾನ, ಪ್ರಧಾನ ಮಂತ್ರಿ ಮಾತೃ ವಂದನಾ ಯೋಜನೆ, ಶಕ್ತಿ ಸದನ ಯೋಜನೆ, ಶಿಶು ಪಾಲನಾ ಕೇಂದ್ರಗಳು, ಬಾಲಕಿಯರ ವಸತಿ ನಿಲಯ ಯೋಜನೆ, ಸಾಂತ್ವನ ಯೋಜನೆ, ಸ್ತ್ರೀ ಶಕ್ತಿ ಯೋಜನೆ ಸೇರಿದಂತೆ ಇತರೆ ಯೋಜನೆಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ.ನಂದಿತಾ, ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಕೆ.ಡಿ.ಬಡಿಗೇರ, ಮಿಶನ್ ಶಕ್ತಿ ಯೋಜನೆಯ ನಿರ್ವಾಹಕರಾದ ಗಿರಿಜಾ, ಸಖಿ ಒನ್ ಕೇಂದ್ರ ರೀಮ್ಸ್ ಸಿಬ್ಬಂದಿ ಭಾಗ್ಯವತಿ, ಒ.ಎಸ್.ಸಿ ಲೀಗಲ್ ಅಡ್ವೋಕೇಟ್ ಪಾರ್ವತಿ ಸೇರಿದಂತೆ ಇತರರು ಇದ್ದರು.

### ಸ್ವಚ್ಛ, ಸುಂದರ ನಗರವಾಗಿಸಲು ಪ್ರಾಮಾಣಿಕ ಪ್ರಯತ್ನ ನಡೆಸಿ: ಪಾಲಿಕೆ ಆಯುಕ್ತ ಜುಬೀನ್ ಸಲಹೆ

ಬಳಕೆದಾರರ ಶುಲ್ಕ ಸಂಗ್ರಹಣೆಗೆ ನಾಗರಿಕರನ್ನು ಸಂವೇದನಾಶೀಲರನ್ನಾಗಿಸಬೇಕು. ಕಸ ಬಿಸಾಡಲು ಆಸ್ಪದ ನೀಡುವಂತಹ ಸ್ಥಳಗಳಲ್ಲಿ ಅವಕಾಶ ಕೊಡಬಾರದು ಎಂದರು.

ಪಾಲಿಕೆಯ ವ್ಯಾಪ್ತಿಗೆ ಬರುವ ಎಲ್ಲಾ ವಸತಿ ಪ್ರದೇಶಗಳು, ಶಾಲೆಗಳು, ಮುಖ್ಯ ಮಾರುಕಟ್ಟೆಗಳು, ಬಸ್ ನಿಲ್ದಾಣಗಳು, ರೈಲು ನಿಲ್ದಾಣಗಳು, ಉದ್ಯಾನವನಗಳು, ಆಸ್ಪತ್ರೆಗಳು, ರೆಸ್ಟೋರೆಂಟ್‌ಗಳು ಮತ್ತು ಧಾರ್ಮಿಕ ಸ್ಥಳಗಳಲ್ಲಿ ಸ್ವಚ್ಛ ಭಾರತ್ ಮಿಷನ್ (ನಗರ) ಮಾರ್ಗಸೂಚಿಗಳ ಪ್ರಕಾರ ಆಯಾ ಸ್ಥಳಕ್ಕೆ ಸಂಬಂಧಿಸಿದಂತೆ ಸ್ವಚ್ಛತಾ ಅಭಿಯಾನಗಳನ್ನು ಕೈಗೊಳ್ಳಬೇಕು. ಅಲ್ಲದೆ ಸ್ವಚ್ಛ ಸರ್ವೇಕ್ಷಣೆ ಮತ್ತು ಸ್ವಚ್ಛತೆಯನ್ನು ಪ್ರಮಾಣೀಕರಿಸಬೇಕೆಂದರು.

ಸ್ವಚ್ಛ ಸರ್ವೇಕ್ಷಣ್ ಲೀಗ್‌ಗಳಲ್ಲಿ ಭಾಗವಹಿಸುವಂತೆ ಮತ್ತು ಅದರ ಬಗ್ಗೆ ಸಕಾರಾತ್ಮಕ ಹಿಮ್ಮಾಹಿತಿ ಪಡೆಯಲು ಅತಿ ಹೆಚ್ಚಿನ ಸಂಖ್ಯೆಯಲ್ಲಿ ನಾಗರೀಕರನ್ನು ಸಂಪರ್ಕಿಸಲು ಸ್ವಸಹಾಯ ಗುಂಪಿನ ಸದಸ್ಯರು ಪಾಲಿಕೆಗೆ ಸಹಾಯ ಮಾಡಬೇಕು. ಸಾರ್ವಜನಿಕರು ಸಾಮಾನ್ಯವಾಗಿ ಕಸ ಬಿಸಾಡುವಂತಹ ಜಾಗಗಳ ಮೇಲೆ ಕಣ್ಣು ಇಡಬೇಕು. ಮತ್ತು ಎರಡನೇ ಹಂತದ ಕಸ ಸಂಗ್ರಹಿಸುವ ವ್ಯವಸ್ಥೆಯ ಬಗ್ಗೆ ಮೇಲ್ವಿಚಾರಣೆಯಲ್ಲಿ ನೆರವಾಗಬೇಕು. ತ್ಯಾಜ್ಯ ಮೂಲದಲ್ಲಿ ಕಸವನ್ನು ಪ್ರತ್ಯೇಕಿಸುವ ಸಲುವಾಗಿ ಮನೆಮನೆಗೂ ತೆರಳಿ ಕಸ ವಿಂಗಡಣೆಯ ಬಗ್ಗೆ ಅರಿವು ಮೂಡಿಸಬೇಕೆಂದು ಸ್ವ–ಸಹಾಯ ಗುಂಪುಗಳ ಸದಸ್ಯರಿಗೆ ಸೂಚಿಸಿದರು.

ಈ ವೇಳೆ ಸ್ವ–ಸಹಾಯ ಗುಂಪುಗಳ ಸದಸ್ಯರಿಂದ ಪಾಲಿಕೆಯ ಅಧ್ಯಕ್ಷರಿಗೆ ಹಾಗೂ ಆಯುಕ್ತರಿಗೆ ಸನ್ಮಾನ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಪಾಲಿಕೆಯ ಅಭಿವೃದ್ಧಿ ವಿಭಾಗದ ಉಪ ಆಯುಕ್ತರಾದ ಸಂತೋಷ ರಾಣಿ, ಪರಿಸರ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಜೈಪಾಲ್ ರೆಡ್ಡಿ, ಪಾಲಿಕೆಯ ಸಂಘಟನಾ ಅಧಿಕಾರಿ ಕೃಷ್ಣ ಕಟ್ಟಿಮನಿ ಸೇರಿದಂತೆ ಇತರರು ಇದ್ದರು.

### ಬೀದಿ ನಾಯಿಗಳ ಹಾವಳಿ ರಾಜ್ಯದಲ್ಲೂ ಸುಪ್ರೀಂ ಆದೇಶ ಪಾಲನೆಗೆ ಮನವಿ

ಖಾದರ್, ಬೀದಿ ನಾಯಿಗಳ ನಿಯಂತ್ರಣಕ್ಕೂ ಸುಪ್ರೀಂ ಕೋರ್ಟ್ ಬರಬೇಕಾಯಿತು ಎಂದು ಹಾಸ್ಯದ ದಾಟಿಯಲ್ಲಿ ಹೇಳಿದರು.

ಈ ಹಂತದಲ್ಲಿ ಎದ್ದುನಿಂತು ಮಾತನಾಡಿದ ಬಿಜೆಪಿಯ ಉಮಾನಾಥ್ ಕೋಟ್ಯನ್, ಶಾಸಕರ ಭವನದಲ್ಲೂ ನಾಯಿಗಳ ಹಾವಳಿ ಹೆಚ್ಚಿದೆ. ಕೊಠಡಿಯ ಮುಂದೆ, ಮ್ಯಾಟ್‌ಗಳ ಮೇಲೆ ಮಲ, ಮೂತ್ರ ವಿಸರ್ಜಿಸಿ ಪರಿಸರ ಹಾಳು ಮಾಡುತ್ತಿವೆ ಎಂದರು.

ಇದಕ್ಕೆ ದನಿಗೂಡಿಸಿದ ಬಿಜೆಪಿಯ ಸುರೇಶ್ ಅವರು, ಶಾಸಕರ ಭವನ ನಿಮ್ಮ ವ್ಯಾಪ್ತಿಗೆ ಬರುತ್ತದೆ, ನಾಯಿಗಳನ್ನು ಓಡಿಸಿ ಎಂದರು. ವಿಧಾನಸೌಧ ಹಾಗೂ ಶಾಸಕರ ಭವನ ಎರಡೂ ಕಡೆ ನಾಯಿಗಳ ಹಾವಳಿ ಹೆಚ್ಚಿದೆ. ಎರಡೂ ಕಡೆ ನಾಯಿಗಳಿಂದ ನಮ್ಮನ್ನು ಕಾಪಾಡಿ ಎಂದು ಡಾ. ಸಿ.ಎನ್. ಅಶ್ವತ್ಥನಾರಾಯಣ ಸಭಾಧ್ಯಕ್ಷರಿಗೆ ಕೈ ಮುಗಿದರು.

ಆಗ ಸಭಾಧ್ಯಕ್ಷರು ನಾಯಿಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳೋಣ ಎಂದು ಹೇಳಿದರು.

## ಗ್ರಂಥಪಾಲಕರ ದಿನಾಚರಣೆ ಅಂಗವಾಗಿ ಉತ್ತಮ ಗ್ರಂಥಪಾಲಕ ಪ್ರಶಸ್ತಿ ವಿತರಣೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.13**–ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಗ್ರಂಥಪಾಲಕರ ದಿನಾಚರಣೆ ಕಾರ್ಯಕ್ರಮವನ್ನು ಡಾ. ಎಸ್.ಆರ್.ರಂಗನಾಥನ್ ರವರ ಭಾವಚಿತ್ರಕ್ಕೆ ಪುಷ್ಪ ಸಲ್ಲಿಸುವ ಮೂಲಕ ಆಚರಿಸಿ ತಾ.ಪಂಚಾಯಿತಿ ಇ.ಓ. ಖಾಲಿದ್ ಅಹಮ್ಮದ್ ಮಾತನಾಡಿ ಭಾರತದ ಗ್ರಂಥಾಲಯ ವಿಜ್ಞಾನದ ಪಿತಾಮಹ ಡಾ. ಎಸ್.ಆರ್.ರಂಗನಾಥನ್ ರವರ ಜನ್ಮದಿನವನ್ನು ನಾವು ಗ್ರಂಥಪಾಲಕರ ದಿನಾಚರಣೆಯನ್ನಾಗಿ



ಆಚರಿಸಲಾಗುತ್ತದೆ ಇಂದಿನ ಡಿಜಿಟಲ್ ಯುಗದಲ್ಲಿಯು ಕೂಡ ಪುಸ್ತಕಗಳು ಸಾರ್ವಜನಿಕರಲ್ಲಿ ಜ್ಞಾನವನ್ನು ಹೆಚ್ಚಿಸುತ್ತಿವೇ ಜ್ಞಾನದ ಕಣಜಗಳೆಂದೆ ಗ್ರಂಥಾಲಯಗಳನ್ನು ಕರೆಯಲಾಗುತ್ತದೆ ಗ್ರಂಥಲಾಯಗಳಲ್ಲಿ ಪುಸ್ತಗಳನ್ನು ಸರಿಯಾಗಿ ನಿರ್ವಹಿಸಿ ಓದುಗರಿಗೆ ಸುಲಾಭವಾಗಿ ದೊರೆಯುವಂತೆ ಮಾಡುವಲ್ಲಿ ಗ್ರಂಥಪಾಲಕರ ಪಾತ್ರ ಮಹಾತ್ವದಾಗಿದೆ ಎಂದು ತಿಳಿಸಿದರು.

ತಾಲೂಕಿನ ವಿವಿಧ ಗ್ರಂಥಾಲಯಗಳಲ್ಲಿ ಉತ್ತಮ ಸೇವೆಸಲ್ಲಿಸಿದ ಗ್ರಂಥಾಲಯ ಮೇಲ್ವಿಚಾರಕರಿಗೆ ಉತ್ತಮ ಗ್ರಂಥಪಾಲಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಾ.ಪಂ. ಸಹಾಯಕ ನಿರ್ದೇಶಕರಾದ ದೀಪ, ಹಾಗೂ ತಾ. ಕ್ಷೇತ್ರ ಶಿಕ್ಷಣ ಅಧಿಕಾರಿಗಳಾದ ಚಂದ್ರಶೇಖರ್.ಡಿ,ತಾಲೂಕಿನ ವಿವಿಧ ಗ್ರಂಥಾಲಯಗಳ ಗ್ರಂಥಾಲಯ ಮೇಲ್ವಿಚಾರಕರು ಸಿಬ್ಬಂದಿಗಳು ಇದ್ದರು.

## ಶಿಕ್ಷಣ ಸೇವಾರತ್ನ ಪ್ರಶಸ್ತಿಗೆ ಬಾಜನ ಈರನಗೌಡ ಅಸರತ್ತಿ ಹುಲಿಗುಡ್ಡ

**ಯುವ ಮಾರ್ಗ ಸುದ್ದಿ**



**ದೇವದುರ್ಗ,ಆ.13**–ತಾಲೂಕಿನ ಸರಕಾರಿ ಪ್ರಥಮ ದರ್ಜೆ ಕಾಲೇಜು ಜಾಲಹಳ್ಳಿಯಲ್ಲಿ ರಾಜ್ಯಶಾಸ್ತ್ರದ ಉಪನ್ಯಾಸಕರಾಗಿ ಸೇವೆಯನ್ನು ನಿರ್ವಹಿಸುತ್ತಾ ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಉಪನ್ಯಾಸಕರಾಗಿ ಹಾಗೂ ಸಾಮಾಜಿಕ ಸೇವೆಯನ್ನು ನಿರ್ವಹಿಸುತ್ತಾ ಸಮಾಜದ ಅಭಿವೃದ್ಧಿಗೆ ಶ್ರಮಿಸಿದ ಸವಿನೆನಪಿಗಾಗಿ ಕನ್ನಡ ಫಿಲಿಂ ಚೇಂಬರ್ ಸಂಸ್ಥೆಯ ನೀಡುವ ಶಿಕ್ಷಣ ಸೇವಾರತ್ನ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ ಇವರಿಗೆ ದಿನಾಂಕ : 17.08.2025 ಭಾನುವಾರ ಬೆಳಗ್ಗೆ 10 ಗಂಟೆಯಿಂದ, ರವೀಂದ್ರ ಕಲಾಕ್ಷೇತ್ರ ಬೆಂಗಳೂರಿನಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ನಿಗದಿ ಕ್ಷೇತ್ರ ಹಾಗೂ ಸಮಾಜದಲ್ಲಿ ತಮ್ಮದೇಯಾದ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವ ಸಾಧಕರಿಗೆ ಸನ್ಮಾನ ಮಾಡಿ ಗೌರವಿಸುವ ಕಾರ್ಯಕ್ರಮ ಆಯೋಜಿಸಿದ್ದು ನಿಮ್ಮ ಸಾಧನೆಯನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ತಮಗೆ ತಿಳಿಸಲು ಹರ್ಷಿಸುತ್ತೇವೆ, ತಾವುಗಳು ತುಂಬು ಹೃದಯದಿಂದ ನಿಮ್ಮ ಕುಟುಂಬ ಹಾಗೂ ಸ್ನೇಹಿತರ ಜೊತೆಗೆ ಕಾರ್ಯಕ್ರಮಕ್ಕೆ ಆಗಮಿಸಿ ಇಲ್ಲಿ ನಡೆಯುವ ಅರ್ಥಪೂರ್ಣ ವರ್ಣರಂಜಿತ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪ್ರಶಸ್ತಿ ಸ್ವೀಕರಿಸಲಿದ್ದಾರೆ ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯರು ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಶುಭ ಹಾರೈಸಿದ್ದಾರೆ

## ನೀರಮಾನ್ವಿ ಗ್ರಾಮ ಪಂಚಾಯಿತಿಗೆ ಅಕಸ್ಮಿಕ ಭೇಟಿ ನೀಡಿ ಪರಿಶೀಲಿಸಿದ ಇ.ಓ. ಖಾಲೀದ್ ಅಹಮ್ಮದ್

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.13**– ತಾಲೂಕಿನ ನೀರಮಾನ್ವಿ ಗ್ರಾಮ ಪಂಚಾಯಿತಿಗೆ ಬುಧುವಾರ ತಾಲೂಕು ಪಂಚಾಯಿತಿ ಇ.ಓ. ಖಾಲೀದ್ ಅಹಮ್ಮದ್ ಅಕಸ್ಮಿಕವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿ ನೀರಮಾನ್ವಿ ಗ್ರಾಮ ಪಂಚಾಯಿತಿಗೆ ಸರ್ಕಾರದಿಂದ ನಿಗದಿಪಡಿಸಿರುವ ಕರ ವಸುಲಾತಿ ಗುರಿಗೆ ಅನುಗುಣವಾಗಿ ಕರ ವಸುಲಾತಿ ಮಾಡಿ ಕರವಸೂಲಾತಿಯ ವಿವರಗಳನ್ನು ಪಂಚತಂತ್ರ 2.0ದಲ್ಲಿ ಪ್ರತಿದಿನ ದಾಖಲಿಸಬೇಕು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ 2025–26 ನೇ ಸಾಲಿನ ಕಾಮಗಾರಿ ಕಡತಗಳನ್ನು ಕಾಮಗಾರಿ ಮುಗಿದ ತಕ್ಷಣವೇ ತಯಾರಿ ಮಾಡಿಕೊಂಡು ಗುರಿಗೆ ಅನುಗುಣವಾಗಿ ಮಾನವ ದಿನಗಳ ಸೃಜನಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಗ್ರಾಮದ ಮನೆಗಳಿಗೆ ಪೂರೈಕೆ ಮಾಡುವ ನೀರಿನ ಸಂಗ್ರಹಣ ಟ್ಯಾಂಕ್‌ಗಳನ್ನು



ನಿಯಮಿತವಾಗಿ ಸ್ವಚ್ಛಗೊಳಿಸಬೇಕು ಗ್ರಾಮದ ಪ್ರತಿ ಮನೆಗಳಿಂದ ವಾಹನಗಳ ಮೂಲಕ ಕಸ ಸಂಗ್ರಹಿಸಿ ಕಸವಿಲೇವಾರಿ ಮಾಡುವುದರ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಗ್ರಾಮ ಪಂಚಯಿತಿ ಅಭಿವೃದ್ಧಿ ಆಧಿಕಾರಿ ಮಹಮ್ಮದ್ ಜುಬೇರ ರವರಿಗೆ ಸೂಚಿಸಿದರು.


## 200 ಮಹಾಗನಿ ಮರ ಕಡಿದ ಇಬ್ಬರು ಆರೋಪಿಗಳ ಬಂಧನ

**ಕಲಬುರಗಿ,ಆ.13**–ಫರಹತಾಬಾದ ಪೊಲೀಸ್ ಠಾಣೆ ವ್ಯಾಪ್ತಿಯ ತಾಡತೆಗನೂರ ಸೀಮಾಂತರದಲ್ಲಿರುವ ಹೊಲದಲ್ಲಿನ 2 ಲಕ್ಷ ರೂಪಾಯಿ ಮೌಲ್ಯದ 200 ಮಹಾಗನಿ ಮರಗಳನ್ನು ದುರುದ್ದೇಶದಿಂದ ಕಡೆದಿದ್ದ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ತಾಡತೆಗನೂರ ಗ್ರಾಮದ ಶರಣಪ್ಪ ತಂದೆ ಧರ್ಮಣ್ಣ ಪೂಜಾರಿ ಮತ್ತು ಹಣಮಂತ ತಂದೆ ಲಾಲಪ್ಪ ಹರಳಯ್ಯ ಎಂಬುವವರನ್ನು ಬಂಧಿಸಿ ಕೃತ್ಯಕ್ಕೆ ಬಳಸಿದ 2 ಕೊಡಲಿಗಳನ್ನು ಜಪ್ತಿ ಮಾಡಿ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ತಾಡತೆಗನೂರ ಸೀಮಾಂತರದಲ್ಲಿರುವ ತಮ್ಮ ಜಮೀನಿನಲ್ಲಿನ 250 ಮಹಾಗನಿ ಮರಗಳ ಪೈಕಿ ಸುಮಾರು 2 ಲಕ್ಷ ರೂ.ಬೆಲೆ ಬಾಳುವ 200 ಮರಗಳನ್ನು ದುಷ್ಕರ್ಮಿಗಳು ಕಡಿದು ಹೊಲದಲ್ಲಿಯೇ ಬಿಸಾಕಿ ಹೋಗಿದ್ದಾರೆ ಎಂದು ಅನ್ನಪೂರ್ಣ ಗಂಡ ಶಶಿಕಾಂತ ಹಿರೇಮಠ ಎಂಬುವವರು ಫರಹತಾಬಾದ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು.

ಈ ದೂರಿನ ಅನ್ವಯ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ್ ಅವರ ಮಾರ್ಗದರ್ಶನದಲ್ಲಿ ಸಬ್–ಅರ್ಬನ್ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಡಿ.ಜಿ.ರಾಜಣ್ಣ ಅವರ ನೇತೃತ್ವದಲ್ಲಿ ಫರಹತಾಬಾದ ಪೊಲೀಸ್ ಠಾಣೆ ಪಿಐ ಮಲ್ಲಿಕಾರ್ಜುನ ಇಕ್ಕಳಕಿ, ಎಎಸ್‌ಐಗಳಾದ ಸೈಯದ್ ಮೊಹಿದ್ದೀನ್, ಅಶೋಕ ಜಮಾದಾರ, ಸಿಬ್ಬಂದಿಗಳಾದ ಕಲ್ಯಾಣಕುಮಾರ, ಸಾಜಿದ್ ಪಾಷಾ, ಆನಂದ ಅವರನ್ನು ಒಳಗೊಂಡ ತಂಡ



ರಚಿಸಲಾಗಿತ್ತು. ಈ ತಂಡ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ. ಇದರಲ್ಲಿ ಮೊದಲನೇ ಆರೋಪಿ ಶರಣಪ್ಪ ಪೂಜಾರಿ ಅನ್ನಪೂರ್ಣ ಹಿರೇಮಠ ಅವರ ಹೊಲದಲ್ಲಿ ಪಾಲುಗಾರಿಕೆ ಮಾಡಿಕೊಂಡಿದ್ದು, ಮಹಾಗನಿ ಮರಗಳು ಬೆಳೆದರೆ ಮುಂದಿನ ಯಾವುದೇ ಬೆಳೆಗಳು ಬರುವುದಿಲ್ಲ ಅಂದುಕೊಂಡು ಇನ್ನೊಬ್ಬ ಆರೋಪಿ ಹಣಮಂತ ಹರಳಯ್ಯ ಜೊತೆ ಸೇರಿ ಈ ದುಷ್ಕೃತ್ಯ ಎಸಗಿರುವುದಾಗಿ ವಿಚಾರಣೆ ವೇಳೆ ತಪ್ಪೊಪ್ಪಿಕೊಂಡಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಈ ಪ್ರಕರಣದಲ್ಲಿ ಆರೋಪಿಗಳನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ಶ್ಲಾಘಿಸಿದ್ದಾರೆ.

# ಕಣ್ಣಿನ ಕಪ್ಪು ಕಲೆ ಸಮಸ್ಯೆಯೇ

ಕಪ್ಪುವೃತ್ತಗಳು ಸಣ್ಣವಯಸ್ಸಿನಲ್ಲೇ ಕಾಣಿಸಿಕೊಳ್ಳಬಹುದು, ಆದರೆ ಇದು ಹೆಚ್ಚಾಗಿ ವಯಸ್ಕರಲ್ಲಿ ಕಾಣಿಸಿಕೊಳ್ಳುತ್ತದೆ. ಇದನ್ನು ತಡೆಯಲು ಉತ್ತಮ ವಿಧಾನವೆಂದರೆ ಪೌಷ್ಟಿಕ ಆಹಾರ ತೆಗೆದುಕೊಳ್ಳುವುದು, ತಾಜಾ ಹಣ್ಣು ತಿನ್ನುವುದು ಮತ್ತು ಮೊಸರು ಬೇಳೆಕಾಳುಗಳು, ಸಂಸ್ಕರಿಸಿದ ಧಾನ್ಯಗಳು, ಕೆನೆ ತೆಗೆದ ಹಾಲು, ಸೊಪ್ಪುಗಳು ಮತ್ತು ಬೀನ್ಸ್ ಇವುಗಳನ್ನು ಹೆಚ್ಚಾಗಿ ಬಳಸುವುದು.

ಪ್ರತಿದಿನ ವ್ಯಾಯಾಮ ಮಾಡುವುದು, ರಕ್ತ ಸಂಚಲನ ಸುಲಭವಾಗಿ ಆಗಲು ಉಸಿರಾಟದ ವ್ಯಾಯಾಮಗಳನ್ನು ಮಾಡುವುದು ಮತ್ತು ಒತ್ತಡ, ಆತಂಕಗಳನ್ನು ಕಡಿಮೆ ಮಾಡಿಕೊಳ್ಳುವುದು ಕೂಡ ಕಪ್ಪು ವೃತ್ತ ತಡೆಯಲು ಉತ್ತಮ ವಿಧಾನವಾಗಿದೆ.

ಪ್ರತಿದಿನ ಕಡಿಮೆ ಎಂದರೆ 7 ತಾಸು ನಿದ್ದೆ ಮಾಡಿ. ಪ್ರತಿದಿನ 20 ನಿಮಿಷ ಧ್ಯಾನ ಮತ್ತು ಸಂಗೀತ ಕೇಳುವುದರ ಮೂಲಕ ಕಳೆಯಿರಿ. ಕ್ರೀಂ ಹಚ್ಚುವಾಗ ಮತ್ತುಮೇಕಪ್ ಮಾಡುವಾಗ ನಿಧಾನವಾಗಿ ಹಚ್ಚಿ. ಕಣ್ಣಿನ ಕೆಳ ಭಾಗದಲ್ಲಿ ಹೆಚ್ಚು ಮಸಾಜ್ ಮಾಡಬೇಡಿ. ಕಣ್ಣಿನ ಕೆಳಗೆ ಮಸಾಜ್ ಮಾಡಲು ವೃತ್ತಿಪರ ಮಸಾಜುಗಾರರಿಗೆ ಮಾತ್ರ ಅವಕಾಶ ಕೊಡಿ.

ಕಣ್ಣಿನ ಸುತ್ತ ವಿಶೇಷವಾಗಿ ಅದಕ್ಕೆಂದೇ ತಯಾರಿಸಿದ ಕ್ರೀಮ್ ಬಳಸಿ. 15 ನಿಮಿಷಗಳ ನಂತರ ಹತ್ತಿಯಿಂದ ಒರೆಸಿ ತೆಗೆಯಿರಿ. ರಾತ್ರಿ ಪೂರ್ತಿ ಕ್ರೀಂ ಅನ್ನು ಹಾಗೆಯೇ ಬಿಡಬೇಡಿ. ಬಾದಾಮಿಯನ್ನು ಒಳಗೊಂಡ ಕಣ್ಣಿನ ಕೆಳಗೆ ಬಳಸುವ ಕ್ರೀಂ ಅನ್ನು ಬಳಸಿ ಇದರಲ್ಲಿ ಪೋಷಕಾಂಶಗಳು ಅಧಿಕವಾಗಿ ಇರುತ್ತವೆ. ಇದು ರಕ್ತ ಸಂಚಲನವನ್ನು ಸುಗಮವಾಗಿಸುತ್ತದೆ. ಕಣ್ಣಿನ ಸುತ್ತ ಫೇಶಿಯಲ್ ಮಾಸ್ಕ್ ಬಳಸಬೇಡಿ.

ಕಣ್ಣಿನ ಆಯಾಸ ಕಡಿಮೆ ಮಾಡಲು ಬೆಚ್ಚಗಿನ ನೀರಿನಿಂದ ತೊಳೆಯಿರಿ ನಂತರ ತಣ್ಣನೆ ನೀರಿನಿಂದ

ಕೂಡ ಕಣ್ಣನ್ನು ತೊಳೆಯಿರಿ. ಇದು ರಕ್ತ ಸಂಚಲನವನ್ನು ಸುಗಮವಾಗಿಸುವುದರ ಮೂಲಕ ಕಪ್ಪು ವೃತ್ತಹೋಗಲಾಡಿಸುತ್ತದೆ. ಸೌತೆಕಾಯಿಯ ರಸವನ್ನು ಪ್ರತಿದಿನ ಕಣ್ಣಿನ ಸುತ್ತ ಹಚ್ಚಿ ಮತ್ತು 15 ನಿಮಿಷದ ನಂತರ ನೀರಿನಿಂದ ತೊಳೆಯಿರಿ.



ಕಪ್ಪು ವೃತ್ತ ಹೋಗಲಾಡಿಸಲು ಆಲುಗಡ್ಡೆ ಮತ್ತು ಸೌತೆಕಾಯಿ ಮಿಶ್ರಣದ ರಸವನ್ನು ಕೂಡ ಬಳಸಬಹುದು.

ನಿಂಬೆ ಹಣ್ಣು ಮತ್ತು ಸೌತೆ ಕಾಯಿಯನ್ನು ಸಮಪ್ರಮಾಣದಲ್ಲಿ ಬೆರೆಸಿ ಅದರ ರಸವನ್ನು ಪ್ರತಿದಿನ ಹಚ್ಚಿ ಮತ್ತು 15 ನಿಮಿಷದ ನಂತರ ನೀರಿನಲ್ಲಿ ತೊಳೆದುಕೊಂಡರೆ ಕಪ್ಪು ವೃತ್ತಕ್ಕೆ ಮುಕ್ತಿ ಸಿಗುತ್ತದೆ.

ಟೊಮೆಟೊ ಜ್ಯೂಸ್ ಕೂಡ ಅಷ್ಟೇ ಒಳ್ಳೆಯದು. ಇದನ್ನು ಹಚ್ಚಿ 20 ನಿಮಿಷ ಹಾಗೆಯೇ ಬಿಡಿ. ಇದಕ್ಕೆ ಐಸ್ ಅಥವಾ ತಣ್ಣನೆಯ ನೀರನ್ನು ಹಚ್ಚಿ 10 ನಿಮಿಷ ಹಾಗೆಯೇ ಬಿಡಿ.

ತಣ್ಣಗಿನ ಟೀ ಬ್ಯಾಗ್ ಅನ್ನು ಕಣ್ಣಿನ ಕೆಳಭಾಗದಲ್ಲಿ ಇಡುವುದರಿಂದ ಕೂಡ ಕಣ್ಣಿನ ಕಪ್ಪು ಕಲೆಗಳು ಮಾಯವಾಗುತ್ತವೆ.

ಬಾದಾಮಿ ಎಣ್ಣೆ ಕೂಡ ಉತ್ತಮ ಮನೆ ಮದ್ದು.ಮಲಗುವ ಮೊದಲು ಬಾದಾಮಿ ಮತ್ತು ಹಾಲನ್ನು ಮಿಶ್ರ ಮಾಡಿ ಅದನ್ನು ಕಣ್ಣಿನ ಸುತ್ತಲು ಹಚ್ಚಿ. ಮಾರನೆಯ ದಿನ ಬೆಳಗ್ಗೆ ತಣ್ಣನೆಯ ನೀರಿನಿಂದ ತೊಳೆಯಿರಿ.

ಜಜ್ಜಿದ ಪುದೀನ ಎಲೆಗಳು ಕೂಡ ಕಣ್ಣಿನ ಸುತ್ತಲಿನ ಕಪ್ಪು ಕಲೆ ಹೋಗಲಾಡಿಸಲು ಉತ್ತಮ ಮದ್ದು. ಜಜ್ಜಿನ ಪುದೀನವನ್ನು ಕಣ್ಣಿನ ಕೆಳಭಾಗಕ್ಕೆ ಹಚ್ಚಿ ಮತ್ತು 10 ರಿಂದ 15 ನಿಮಿಷ ಬಿಟ್ಟು ತೊಳೆಯಿರಿ.

ಕಿತ್ತಳೆ ರಸವನ್ನು ಗ್ಲಿಸರಿನ್ ಜೊತೆ ಬೆರೆಸಿ ವಾರದಲ್ಲಿ 3 ಭಾರಿ ಕಣ್ಣಿನ ಸುತ್ತ ಹಚ್ಚಿ 20 ನಿಮಿಷದ ನಂತರ ತೊಳೆಯಿರಿ. ಕಣ್ಣಿನ ಸುತ್ತಲ ಕಪ್ಪು ಕಲೆಗಳನ್ನು ಹೋಗಲಾಡಿಸಿ

# ಮೊಬೈಲ್ ಅಂಗಡಿ ಕಳ್ಳತನ 4.65 ಲಕ್ಷ ರೂ.ಮೌಲ್ಯದ ವಸ್ತು ಜಪ್ತಿ



**ಬೀದರ್,ಆ.13–** ಇಲ್ಲಿನ ಆದರ್ಶ ನಗರ ಕಾಲೋನಿಯಲ್ಲಿ ನಡೆದ ಫೋಟೋ ಸ್ಟುಡಿಯೋ ಕಳ್ಳತನ ಮತ್ತು ಮಾತಾ ಮಾಣಿಕೇಶ್ವರಿ ಕಾಲೇಜಿನ ಎದುರುಗಡೆ ಇರುವ ಕಾಂಪ್ಲೆಟ್‌ನಲ್ಲಿ ನಡೆದ ಮೊಬೈಲ್ ಅಂಗಡಿ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾನೂನು ಸಂಘರ್ಷಕ್ಕೆ ಒಳಪಟ್ಟ ಬಾಲಕನೊಬ್ಬನನ್ನು ಅಭೀರಕ್ಷೆಗೆ ಪಡೆದು ಆತನಿಂದ 1.35 ಲಕ್ಷದ ವಸ್ತುಗಳು ಮತ್ತು ಒಂದು ಬೈಕ್ ಸೇರಿ 4.65 ಲಕ್ಷ ರೂ.ಮೌಲ್ಯದ ಸ್ವತ್ತನ್ನು ಜಪ್ತಿ ಮಾಡಲಾಗಿದೆ ಎಂದು ಎಸ್‌ಪಿ ಪ್ರದೀಪ ಗುಂಟಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆದರ್ಶ ನಗರ ಕಾಲೋನಿಯಲ್ಲಿರುವ ಫೋಟೋ ಸ್ಟುಡಿಯೋ ಅಂಗಡಿಯ ಮೇಲ್ಛಾವಣಿಯ ಟೀನ್ ತೆಗೆದು ಅಂಗಡಿಯಲ್ಲಿನ ಮೊಬಾಯಿಲ್, ಹಾರ್ಡ್ ಡಿಸ್ಕ್, ಕ್ಯಾಮೆರಾ ಹಾಗೂ ಇತರೆ ಸಾಮಗ್ರಿ ಸೇರಿ 3.65 ಮೌಲ್ಯದ ಬೆಲೆ ಬಾಳುವ ವಸ್ತುಗಳು ಕಳವಾದ ಬಗ್ಗೆ ಮತ್ತು ಮಾತಾ ಮಾಣಿಕೇಶ್ವರಿ ಕಾಲೇಜಿನ ಎದುರುಗಡೆ ಇರುವ ಕಾಂಪ್ಲೆಟ್‌ನಲ್ಲಿನ ಮೊಬೈಲ್ ಅಂಗಡಿಯ ಟಿನ್ ಶೆಡ್ಡಿನ ಮೇಲ್ಛಾವಣಿ ತೆಗೆದು ಲ್ಯಾಪ್‌ಟಾಪ್, ಮೊಬಾಯಿಲ್ ಹಾಗೂ ನಗದು ಹಣ ಸೇರಿ 1.19 ಲಕ್ಷ ರೂ.ಮೌಲ್ಯದ ಬೆಲೆ ಬಾಳುವ ವಸ್ತುಗಳು ಕಳವಾದ ಬಗ್ಗೆ ಗಾಂಧಿಗಂಜ್ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿದ್ದವು.

ಈ ಕಳ್ಳತನ ಪ್ರಕರಣಗಳ ತನಿಖೆಗೆ ಎಸ್‌ಪಿ, ಹೆಚ್ಚುವರಿ ಎಸ್‌ಪಿ ಚಂದ್ರಕಾಂತ ಪೂಜಾರಿ, ಶಿವನಗೌಡ ಪಾಟೀಲ ಅವರ ಮಾರ್ಗದರ್ಶನದಲ್ಲಿ ಗಾಂಧಿಗಂಜ್ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕ ಆನಂದರಾವ ಎಸ್.ಎನ್, ಪಿಎಸ್‌ಐ ವಿದ್ಯವಾನ್, ಸಿಬ್ಬಂದಿಗಳಾದ ಅನೀಲ, ಮನೋಜ್, ಇರ್ಫಾನ್, ಗಂಗಾಧರ, ಸುಧಾಕರ ಅವರನ್ನು ಒಳಗೊಂಡ ತಂಡ ರಚಿಸಲಾಗಿತ್ತು. ಈ ತಂಡ ತನಿಖೆ ನಡೆಸಿ ಕಾನೂನು ಸಂಘರ್ಷಕ್ಕೆ ಒಳಗಾದ ಬಾಲಕನನ್ನು ಅಭೀರಕ್ಷೆಗೆ ಪಡೆದು ಆತನಿಂದ 60 ಸಾವಿರ ರೂ.ಮೌಲ್ಯದ ಒಂದು ಐಫೋನ್, 2 ಲಕ್ಷ ರೂ.ಮೌಲ್ಯದ 2 ಕೆನಾನ್ ಕಂಪನಿಯ ಕ್ಯಾಮೆರಾಗಳು, 10 ಸಾವಿರ ರೂ.ಮೌಲ್ಯದ ಒಂದು ಹಾರ್ಡ್ ಡಿಸ್ಕ್, 25 ಸಾವಿರ ರೂ.ಮೌಲ್ಯದ ಲೆನೊವಾ ಕಂಪನಿಯ ಲ್ಯಾಪ್‌ಟಾಪ್, 40 ಸಾವಿರ ರೂ.ಮೌಲ್ಯದ ಮೊಬೈಲ್ ಎಸ್ಸೆಸರಿಜ್, 60 ಸಾವಿರ ರೂ.ಮೌಲ್ಯದ 11 ಹಳೆಯ ಮೊಬೈಲ್‌ಗಳು, 10 ಸಾವಿರ ರೂ.ಮೌಲ್ಯದ ಒಂದು ಟ್ಯಾಬ್, 60 ಸಾವಿರ ರೂ.ಮೌಲ್ಯದ ಬೈಕ್ ಸೇರಿ 4.65 ಲಕ್ಷ ರೂ.ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿಕೊಂಡು ಕಾನೂನು ಸಂಘರ್ಷಕ್ಕೆ ಒಳಗಾದ ಬಾಲಕನನ್ನು ನ್ಯಾಯಾಲಯದ ಸಮಕ್ಷಮ ಹಾಜರು ಪಡಿಸಲಾಗಿದೆ ಎಂದು ತಿಳಿಸಿದರು.

48 ಗಂಟೆಗಳಲ್ಲಿ ಈ ಎರಡು ಕಳವು ಪ್ರಕರಣಗಳನ್ನು ಭೇದಿಸಿದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.

# ಗ್ರಂಥಾಲಯಗಳು ಜ್ಞಾನದ ಕಣಜಗಳು, ಗ್ರಂಥಪಾಲಕರ ಸೇವೆ ಅನನ್ಯ

**ಕಲಬುರಗಿ,ಅ.13–** ಶ್ರೇಷ್ಠ ಸಂಪತ್ತಾದ ಜ್ಞಾನವನ್ನು ಓದುಗರಿಗೆ ನೀಡುವ ಪುಸ್ತಕಗಳ ಸಂಗ್ರಹಾಲಯವಾದ ಗ್ರಂಥಾಲಯಗಳು ಜ್ಞಾನದ ಕಣಜಗಳಾಗಿವೆ. ಎಲ್ಲಾ ಗ್ರಂಥಗಳನ್ನು ಸುರಕ್ಷಿತವಾಗಿ ಕಾಪಾಡಿ, ಓದುಗರಿಗೆ ಜ್ಞಾನವನ್ನು ಉಣಬಡಿಸುವ ಗ್ರಂಥಪಾಲಕರ ಸೇವೆ ಅನನ್ಯವಾಗಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ್ ಹೇಳಿದರು. ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ "ರಾಷ್ಟ್ರೀಯ ಗ್ರಂಥಾಲಯ ಮತ್ತು ಗ್ರಂಥಪಾಲಕರ ದಿನಾಚರಣೆ"ಯನ್ನು 'ಗ್ರಂಥಾಲಯ ವಿಜ್ಞಾನ ಪಿತಾಮಹ' ಡಾ.ಎಸ್.ಆರ್.ರಂಗನಾಥನ್ ಅವರ ಭಾವಚಿತ್ರಕ್ಕೆ ಪುಷ್ಪ ನಮನಗಳನ್ನು ಸಲ್ಲಿಸಿ ಅವರು ಮಾತನಾಡುತ್ತಿದ್ದರು. ನಮ್ಮ ದೇಶದಲ್ಲಿ 'ರಾಷ್ಟ್ರೀಯ ಗ್ರಂಥಾಲಯ ದಿನ'ವನ್ನು ಪ್ರತಿ ವರ್ಷ 'ಆಗಸ್ಟ್-12' ರಂದು ಆಚರಿಸಲಾಗುತ್ತದೆ.ಈ ದಿನವನ್ನು ಡಾ. ಎಸ್.ಆರ್. ರಂಗನಾಥನ್ ಅವರ ಕೊಡುಗೆಗಳನ್ನು ಸ್ಮರಿಸಲು ಮತ್ತು ಗ್ರಂಥಾಲಯಗಳ ಪ್ರಾಮುಖ್ಯತೆಯನ್ನು ಎತ್ತಿಹಿಡಿಯಲು ಆಚರಿಸಲಾಗುತ್ತದೆ.

ಗ್ರಂಥಾಲಯಗಳು ಜ್ಞಾನದ ಕೇಂದ್ರಗಳಾಗಿವೆ ಮತ್ತು ಸಮಾಜದ ಪ್ರಗತಿಗೆ ಅತ್ಯಗತ್ಯವಾಗಿವೆ.

ಪುಸ್ತಕದ ಮೌಲ್ಯ ಮತ್ತು ಸಾರ್ಥಕ್ಯ ಪಡೆಯಬೇಕಾದರೆ



ಗ್ರಂಥಾಲಯಗಳು ಅವಶ್ಯ ಹಾಗೂ ಗ್ರಂಥಪಾಲಕರ ಪಾತ್ರ ಮಹತ್ವದ್ದಾಗಿದೆ.

ಗ್ರಂಥಾಲಯಗಳು ಎಂದರೆ ಜ್ಞಾನದ ಸಾಗರ, ಪುರಾಣ, ಇತಿಹಾಸ ಕಾಲದಿಂದಲೂ ಇಂದಿನ ಡಿಜಿಟಲ್ ಯುಗದವರೆಗೂ ಅನೇಕ ಪಂಡಿತರು, ಸಂಶೋಧಕರು, ಅನುಭಾವಿಗಳು ತಮ್ಮ ಶ್ರಮ, ಸಮಯ, ಜ್ಞಾನ ಉಪಯೋಗಿಸಿ ಮುಂದಿನ ಪೀಳಿಗೆಗೆ ಗ್ರಂಥಸ್ಥವಾಗಿ ಬರೆದಿಟ್ಟಿದ್ದಾರೆ. ಇಂತಹ ಜ್ಞಾನದೇಗುಲವೇ ಗ್ರಂಥಾಲಯವಾಗಿವೆ. ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ಜನರು ಗ್ರಂಥಾಲಯಗಳ ಸದುಪಯೋಗ ಪಡಿಸಿಕೊಳ್ಳಬೇಕು ಎಂದರು. ಕಾರ್ಯಕ್ರಮದಲ್ಲಿ ದತ್ತು ಹಡಪದ, ಶಿವಯೋಗೆಪ್ಪಾ ಎಸ್. ಬಿರಾದಾರ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ರಾಜ್ಯ ಸರ್ಕಾರದಿಂದ ಧರ್ಮಸ್ಥಳ ಪಾವಿತ್ರ್ಯಕ್ಕೆ ಧಕ್ಕೆ

**ಬೀದರ್:ಅ.13–** ಧರ್ಮಸ್ಥಳ ಶ್ರೀ ಮಂಜುನಾಥ ಕ್ಷೇತ್ರ ಸಮಸ್ತ ಮಾನವ ಕುಲಕೋಟಿಗೆ ಅತ್ಯಂತ ಶ್ರದ್ಧೆ, ಭಕ್ತಿಯುಳ್ಳ ಪವಿತ್ರ ಧಾರ್ಮಿಕ ಕೇಂದ್ರವಾಗಿದೆ. ಆದರೆ ಇಲ್ಲಿ ಸರ್ಕಾರ ಅಸ್ಥಿಪಂಜರ ಶೋಧ ನೆಪದಲ್ಲಿ ಹಿಂದೂ ವಿರೋಧಿ ಧೋರಣೆ ತಾಳಿ, ಧರ್ಮಸ್ಥಳದ ಪಾವಿತ್ರ್ಯಕ್ಕೆ ಧಕ್ಕೆ ತರುವ ಕೆಲಸ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ, ಬೀದರ್ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಕಿಡಿಕಾರಿದ್ದಾರೆ.



ಧರ್ಮ ಸ್ಥಳದಲ್ಲಿ ನೂರಾರು ಹೆಣಗಳು ಹೂತಿರುವೆ. ಅಸ್ಥಿಪಂಜರ ಸಿಗುತ್ತವೆ ಎಂದು ಯಾರೋ ಅನಾಮಿಕ ಹೇಳಿದ ಮಾತ್ರಕ್ಕೆ ಸರ್ಕಾರ ಆತುರಾತುರ ವಿಶೇಷ ತನಿಖಾ ತಂಡವನ್ನೇ (ಎಸ್ ಐಟಿ) ರಚಿಸಿದೆ. ಎರಡ್ಮೂರು ವಾರಗಳಿಂದ ನಡೆದ ಶೋಧದಲ್ಲಿ ಏನು ಸಿಕ್ಕಿದೆ? ತನಿಖೆ ಹೆಸರಿನಲ್ಲಿ ಸರ್ಕಾರ ಯಾವ ಘನಂದಾರಿ ಸಾಧನೆ ಮಾಡಿದೆ? ಅನಾಮಿಕ ಹೇಳಿದಂತೆ ಏನೂ ಸಿಗಲಿಲ್ಲ. ತಕ್ಷಣ ಅನಾಮಿಕನ ವಿರುದ್ಧ ಕ್ರಮ ಕೈಗೊಂಡು, ಆತನ ಹಿನ್ನೆಲೆ, ಯಾರು ಹಿಂದಿದ್ದಾರೆ ಎಂಬ ನಿಜಬಣ್ಣ ಬಯಲು ಮಾಡಬೇಕು. ಸರ್ಕಾರಕ್ಕೆ ದಮ್ ಇದ್ದರೆ ಧರ್ಮಸ್ಥಳದ ವಿರುದ್ಧ ಷಡ್ಯಂತ್ರ ನಡೆಸಿದವರು ಯಾರು ಎಂಬುದು ಪತ್ತೆ ಹಚ್ಚಿ, ತಪ್ಪಿತಸ್ಥರ ವಿರುದ್ಧ ಶೀಘ್ರ ಕಠಿಣ ಕ್ರಮ ಕೈಗೊಳ್ಳಲು ಎಸ್ ಐಟಿ ರಚಿಸಲಿ ಎಂದು ಇಲ್ಲಿ ಹೊರಡಿಸಿರುವ ಪ್ರಕಟಣೆಯಲ್ಲಿ ಆಗ್ರಹಿಸಿದ್ದಾರೆ.

ಧರ್ಮಸ್ಥಳ ವಿಷಯದಲ್ಲಿ ಬರುತ್ತಿರುವ ಆರೋಪ, ಪೂರ್ವಾಪರವಾಗಿ ವಿಚಾರಿಸದೆ ಸರ್ಕಾರ ಎಸ್ ಐಟಿಯಿಂದ ಮಾಡುತ್ತಿರುವ ತನಿಖೆಯನ್ನು ಅವಲೋಕಿಸಿದರೆ ಇದರ ಹಿಂದೆ ಹಿಂದು ಧಾರ್ಮಿಕ ಸ್ಥಳಗಳ ವಿರುದ್ಧ ಕೆಲಸ ಮಾಡುವ ಕುತಂತ್ರಿಗಳು, ಮತಾಂಧರು, ಮತಾಂತರಿಗಳು ದೊಡ್ಡ ಷಡ್ಯಂತ್ರವನ್ನು ಹೆಣೆದಂತೆ ಕಾಣುತ್ತಿದೆ. ಅಂತೆಯೇ ಸರ್ಕಾರದ ತನಿಖೆ ಸಹ ಹೈಡ್ರಾಮಾ ತರಹ ನಡೆದಿದೆ. ಹಿಂದೂ ಧಾರ್ಮಿಕ ಕ್ಷೇತ್ರಕ್ಕೆ ಅವಮಾನ ಮಾಡುವುದು ಈ ಸಮಾಜ ಯಾವತ್ತೂ ಸಹಿಸಲ್ಲ. ಈ ವಿಷಯದಲ್ಲಿ ಬಿಜೆಪಿ ಶ್ರೀ ಮಂಜುನಾಥ ಅಸಂಖ್ಯಾತ ಭಕ್ತರ ಜೊತೆಗೂಡಿ ದೊಡ್ಡ ಮಟ್ಟದ ಹೋರಾಟ ನಡೆಸಲಿದೆ. ಹಿಂದುಗಳ ಭಾವನೆ ಕೆರಳಿಸುವ ಸರ್ಕಾರಕ್ಕೆ ತಕ್ಕ ಪಾಠ ಕಲಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ.

ಎಲ್ಲೋ ಒಂದು ಅಸ್ತಿಪಂಜರ ಪತ್ತೆಯಾಗಿದ್ದಕ್ಕೆ ಯಾರದೋ ಮಾತು ಕೇಳಿ ಎಸ್ ಐಟಿ ರಚಿಸಿ, ಈ ಪ್ರಕರಣಕ್ಕೆ ಧರ್ಮಸ್ಥಳವನ್ನು ನೇರವಾಗಿ ಜೋಡಿಸುವುದು ಎಷ್ಟು ಸರಿ? ರಾಜ್ಯದಲ್ಲಿ ಅನೇಕ ಕಡೆ ಸಮಾಜ ಘಾತುಕ ಶಕ್ತಿಗಳು ಸಕ್ರಿಯವಾಗಿ ಕೊಲೆ, ದೌರ್ಜನ್ಯ, ದರೋಡೆ, ಸುಲಿಗೆ, ಅತ್ಯಾಚಾರದಂಥ ಕುಕೃತ್ಯ ನಡೆಸುತ್ತಿದ್ದಾರೆ. ಈ ಬಗ್ಗೆ ಸರ್ಕಾರಕ್ಕೆ ಚಿಂತೆಯಿಲ್ಲ. ಅವುಗಳ ತನಿಖೆಗೆ ಎಸ್ ಐಟಿ ರಚಿಸುವ ಆಸಕ್ತಿಯಿಲ್ಲ. ಆದರೆ ಹಿಂದು ಧಾರ್ಮಿಕ ಕ್ಷೇತ್ರದ ವಿಷಯದಲ್ಲಿ ಅಲ ಆಗುವುದು ಏಕೆ? ಇದರ ಹಿಂದಿನ ಉದ್ದೇಶ ಜನತೆಗೆ ಗೊತ್ತಾಗಿದೆ. ಹಿಂದು ವಿರೋಧಿ ನಿಲುವಿಗೆ ಸರ್ಕಾರ ಬೆಲೆ ತೆತ್ತುವುದು ಗ್ಯಾರಂಟಿ ಎಂದು ಹೇಳಿದ್ದಾರೆ.

ಧರ್ಮಸ್ಥಳದಲ್ಲಿ ನಡೆಯುವ ಪ್ರತಿ ಕಾರ್ಯಕ್ರಮವೂ ಧರ್ಮಪರ, ಸೇವಾಪರವಾಗಿವೆ. ಅನಾಮಿಕ ಧರ್ಮ ವಿರೋಧಿ ಮಾತು ಕೇಳಿ ಈ ಕ್ಷೇತ್ರಕ್ಕೆ ಹಾಗೂ ಡಾ. ವೀರೇಂದ್ರ ಹೆಗ್ಗಡೆ ಅವರಿಗೆ ಕಳಂಕ ಹಚ್ಚುವುದು ಸಹಿಸಲಾಗದು. ಹಿಂದು ಧಾರ್ಮಿಕ ಕ್ಷೇತ್ರಗಳನ್ನು ಕಾಪಾಡಲು ಬಿಜೆಪಿ ಯಾವುದೇ ರೀತಿಯ ಹೋರಾಟಕ್ಕೂ ಸಿದ್ಧ ಎಂದು ಹೇಳಿದ್ದಾರೆ.

# ಧರ್ಮಸ್ಥಳ ಮಂಜುನಾಥ ದೇವಾಲಯದ ಪಾವಿತ್ರ್ಯತೆಗೆ ಧಕ್ಕೆ ತನಿಖೆ ಹಾಗೂ ಕಾನೂನು ಕ್ರಮಕ್ಕೆ ಮನವಿ

**ಬೀದರ,ಆ.13–** ನಾಡಿನ ಪ್ರಸಿದ್ಧ ಧಾರ್ಮಿಕ ಕೇಂದ್ರ ಧರ್ಮಸ್ಥಳದ ಶ್ರೀ ಮಂಜುನಾಥ ಸ್ವಾಮಿ ದೇವಾಲಯವು ಸುಮಾರು 800 ವರ್ಷಗಳ ಪಾವನ ಇತಿಹಾಸವನ್ನು ಹೊಂದಿದೆ. ಈಗಿನ 21ನೇ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರ ನೇತೃತ್ವದಲ್ಲಿ ಅನೇಕ ಧಾರ್ಮಿಕ ಹಾಗೂ ಸಾಮಾಜಿಕ ಸೇವಾ ಕಾರ್ಯಗಳನ್ನು ಕ್ಷೇತ್ರದಲ್ಲಿ ನಿರಂತರವಾಗಿ ನಡೆಸಲಾಗುತ್ತಿದೆ. ಪ್ರತಿದಿನ ರಾಜ್ಯ ಹಾಗೂ ಹೊರರಾಜ್ಯಗಳಿಂದ ಸಾವಿರಾರು ಭಕ್ತರು ದರ್ಶನಾರ್ಥವಾಗಿ ಬಂದು ಅನ್ನಪ್ರಸಾದ ಸೇವಿಸುತ್ತಾರೆ.




ಆದರೆ ಇತ್ತೀಚೆಗೆ, ಗಿರೀಶ ಮಟ್ಟಣ್ಣ, ಮಹೇಶ್ ತಿಮ್ಮರೋಡಿ, ಜಯಂತ್ ಟಿ ಹಾಗೂ ಯೂಟ್ಯೂಬರ್ ಸಮೀರ್ ಎಂ.ಡಿ ಎಂಬವರು ದೇವಾಲಯ ಮತ್ತು ಧರ್ಮಾಧಿಕಾರಿಗಳ ವಿರುದ್ಧ ಆಧಾರರಹಿತ, ಅವಹೇಳನಕಾರಿ ವಿಡಿಯೋಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಹಂಚುತ್ತಿರುವುದಾಗಿ ಭಕ್ತರು ಆರೋಪಿಸಿದ್ದಾರೆ. ಈ ಸುಳ್ಳು ಪ್ರಚಾರವು ಭಕ್ತರ ಧಾರ್ಮಿಕ ಭಾವನೆಗೆ ಧಕ್ಕೆ ಉಂಟುಮಾಡುತ್ತಿದ್ದು, ಭವಿಷ್ಯದಲ್ಲಿ ಶಾಂತಿಭಂಗ ಹಾಗೂ ಅರಾಜಕತೆ ಉಂಟಾಗುವ ಭೀತಿ ಇದೆ ಎಂದು ಅವರು ಹೇಳಿದ್ದಾರೆ.ಮಾನ್ಯ ಉಚ್ಚ ನ್ಯಾಯಾಲಯವು ಧರ್ಮಸ್ಥಳ ಹಾಗೂ ಹೆಗ್ಗಡೆ ಕುಟುಂಬದ ವಿರುದ್ಧ ಅವಹೇಳನಕಾರಿ ಹೇಳಿಕೆಗಳನ್ನು ನಿಷೇಧಿಸಿದ್ದರೂ, ಆರೋಪಿಗಳು ಅದನ್ನು ಲೆಕ್ಕಿಸದೆ ಅಪಪ್ರಚಾರ ಮುಂದುವರೆಸುತ್ತಿರುವುದಾಗಿ ಭಕ್ತರು ದೂರಿದ್ದಾರೆ.

ಈ ಹಿನ್ನೆಲೆಯಲ್ಲಿ, ಕರ್ನಾಟಕ ಸರ್ಕಾರ ರಚಿಸಿರುವ ವಿಶೇಷ ತನಿಖಾ ತಂಡ (ಖಖಖಿ) ಅಥವಾ ಹೊಸ ತನಿಖಾ ತಂಡವನ್ನು ನಿಯೋಜಿಸಿ, ಆರೋಪಿಗಳ ಹಿನ್ನಲೆ, ಅವರಿಗೆ ದೊರೆಯುತ್ತಿರುವ ಧನಸಹಾಯ ಹಾಗೂ ಪ್ರಚೋದಕರ ಕುರಿತು ಸಂಪೂರ್ಣ ತನಿಖೆ ನಡೆಸಬೇಕೆಂದು ಮನವಿ ಮಾಡಲಾಗಿದೆ. ಹಾಗೆಯೇ ಆರೋಪಿಗಳ ಮೊಬೈಲ್ ಫೋನ್, ಮನೆ ಮತ್ತು ಕಚೇರಿಗಳ ಪರಿಶೀಲನೆ ನಡೆಸಿ ಸತ್ಯಾಂಶವನ್ನು ಬಯಲಿಗೆ ತರುವಂತೆ ಹಾಗೂ ಸಾಮಾಜಿಕ ಮಾಧ್ಯಮಗಳಲ್ಲಿ ನಡೆಯುತ್ತಿರುವ ಅಪಪ್ರಚಾರವನ್ನು ತಕ್ಷಣ ನಿಲ್ಲಿಸುವಂತೆ ಒತ್ತಾಯಿಸಿ ಇಂದು ನಗರದ ಬರೀದ ಶಾಹಿ ಉದ್ಯಾನದಿಂದ ಪ್ರತಿಭಟನೆ ಮೂಲಕ ಜಿಲ್ಲಾಧಿಕಾರಿಗಳ ಕಚೇರಿ ತಲುಪಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಸೋಮನಾಥ ಪಾಟೀಲ, ಈಶ್ವರಸಿಂಗ್ ಠಾಕೂರ್, ಬಸವರಾಜ ಆರ್ಯ, ಬಾಬು ವಾಲಿ, ವಿರಶೆಟ್ಟಿ ಖ್ಯಾಮಾ, ಶಶಿ ಹೊಸಳ್ಳಿ, ವೀರುಪಾಕ್ಷ ಗಾದಗಿ, ಶಿವು ಲೊಖೋಂಡೆ ಅವರು ಧರ್ಮಸ್ಥಳದ ಧಾರ್ಮಿಕ ಹಾಗೂ ಸಾಮಾಜಿಕ ಸೇವಾ ಕಾರ್ಯಗಳನ್ನು ಉದ್ದೇಶಿಸಿ ಮಾತನಾಡಿದ್ದರು.

# ನಶಾ ಮುಕ್ತ ಭಾರತ ಅಭಿಯಾನದ 5ನೇ ವಾರ್ಷಿಕೋತ್ಸವ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.13–** ನಶಾ ಮುಕ್ತ ಭಾರತ ಅಭಿಯಾನದ 5ನೇ ವಾರ್ಷಿಕೋತ್ಸವದ ಕಾರ್ಯಕ್ರಮಗಳು ರಾಯಚೂರ ಜಿಲ್ಲೆಯಾದ್ಯಂತ ಆಗಸ್ಟ್ 13ರಂದು ವಿವಿಧೆಡೆ ನಡೆದವು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಸುರಕ್ಷಾ ಸಂಸ್ಥೆ, ರೋಟರಿ ಕ್ಲಬ್ ಕೃಷ್ಣ ತುಂಗೆ ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಆಗಸ್ಟ್ 13ರ ಬೆಳಗ್ಗೆ ನಗರದ ಪ್ರಥಮ ದರ್ಜೆ ಪದವಿ ಕಾಲೇಜಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ನಶಾ ಮುಕ್ತ ಭಾರತ ಅಭಿಯಾನದ ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಅಧಿಕಾರಿ ಶ್ರೀದೇವಿ ಎಸ್ ನಿಡಗುಂದಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರು, ರೋಟರಿ ಕ್ಲಬ್ ಕೃಷ್ಣ ತುಂಗೆಯ ಅಧ್ಯಕ್ಷರು ಮತ್ತು ಸದಸ್ಯರು ಮತ್ತು ಇನ್ನಿತರರು ಇದ್ದರು.

ನಶಾ ಮುಕ್ತ ಭಾರತ ಅಭಿಯಾನದ ಪ್ರತಿಜ್ಞಾ ವಿದಿ ಕಾರ್ಯಕ್ರಮಗಳು ಜಿಲ್ಲೆಯ ವಿವಿಧ ಶಾಲಾ-ಕಾಲೇಜುಗಳು, ವಿಶ್ವ ವಿದ್ಯಾಲಯಗಳು, ಮೆಡಿಕಲ್ ಕಾಲೇಜು, ಎಂಜಿನಿಯರಿಂಗ್ ಕಾಲೇಜುಗಳಲ್ಲಿ ನಡೆದವು.

## ಪರಿಶಿಷ್ಟ ವರ್ಗಗಳ ಅಲೆಮಾರಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ ಸಿಂಧನೂರ ತಾಲೂಕಿನಲ್ಲಿ ಪ್ರವಾಸ

**ರಾಯಚೂರು,ಆ.13–**ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ ಜಿ ಅವರು ಆಗಸ್ಟ್ 14ರಂದು ರಾಯಚೂರು ಜಿಲ್ಲೆಯ ಸಿಂಧನೂರ ತಾಲೂಕಿನಲ್ಲಿ ಪ್ರವಾಸ ಕೈಗೊಂಡಿದ್ದಾರೆ.

ಬೆಳಿಗ್ಗೆ 10 ಗಂಟೆಗೆ ಜಿಲ್ಲೆಯ ಸಿಂಧನೂರು ನಗರದ ವಾರ್ಡ್ ನಂಬರ್ 23ರ ದೇವರಾಜ ಅರಸು ಮಾರುಕಟ್ಟೆಯಲ್ಲಿ ಅಖಿಲ ಕರ್ನಾಟಕ ಕುಳುವ ಮಹಾಸಂಘ, ಸಿಂಧನೂರು ತಾಲೂಕು ಕುಳುವ ಮಹಾಸಂಘ ಮತ್ತು ಇನ್ನಿತರ ಒಕ್ಕೂಟಗಳ ಸಹಯೋಗದಲ್ಲಿ ಸಿಂಧನೂರಿನಲ್ಲಿ ಹಮ್ಮಿಕೊಂಡ ಕಾಯಕಯೋಗಿ, ಶಿವಶರಣ ಶ್ರೀನುಲಿಯ ಚಂದಯ್ಯನವರ ಜಯಂತ್ಯೋತ್ಸವ ಹಾಗೂ ಶ್ರೀ ನುಲಿಯ ಚಂದಯ್ಯನವರ ಕಂಚಿನ ಮೂರ್ತಿ ಉದ್ಘಾಟನೆ ಕಾರ್ಯಕ್ರಮದಲ್ಲಿ ಭಾಗಿಯಾಗುವರು.

ಮಧ್ಯಾಹ್ನ 3 ಗಂಟೆಗೆ ಸಿಂಧನೂರಿನ ಅಂಬೇಡ್ಕರ್ ನಗರದಲ್ಲಿ ಪರಿಶಿಷ್ಟ ಜಾತಿಯ ಅಲೆಮಾರಿ ಶಿಳ್ಳೆಕ್ಯಾತ ಸಮುದಾಯದ ಕುಟುಂಬಗಳು ವಾಸಿಸುತ್ತಿರುವ ಸ್ಥಳ ವೀಕ್ಷಣೆ ಹಾಗೂ ವಿವಿಧ ಅಧಿಕಾರಿಗಳೊಂದಿಗೆ ಕುಂದುಕೊರತೆಗಳನ್ನು ಆಲಿಸಲಿದ್ದಾರೆ.

ಸಿಂಧನೂರಿನ ವಾರ್ಡ್ ನಂಬರ್ 27ರ ಹಿರೇಲಿಂಗೇಶ್ವರ ಕಾಲೋನಿಯಲ್ಲಿ ಪರಿಶಿಷ್ಟ ಜಾತಿಯ ಅಲೆಮಾರಿ ಬುಡ್ಗಜಂಗಮ ಸಮುದಾಯದ ಕುಟುಂಬಗಳು ವಾಸಿಸುತ್ತಿರುವ ಸ್ಥಳ ವೀಕ್ಷಣೆ ಹಾಗೂ ವಿವಿಧ ಅಧಿಕಾರಿಗಳೊಂದಿಗೆ ಕುಂದು ಕೊರತೆಗಳನ್ನು ಆಲಿಸಲಿದ್ದಾರೆ.

ಸಂಜೆ 4 ಗಂಟೆಗೆ ಸಿಂಧನೂರಿನ ಗಂಗಾನಗರದಲ್ಲಿ ಪರಿಶಿಷ್ಟ ಪಂಗಡದ ಅಲೆಮಾರಿ ಮೇದಾ ಸಮುದಾಯದ ಕುಟುಂಬಗಳು ವಾಸಿಸುತ್ತಿರುವ ಸ್ಥಳ ವೀಕ್ಷಣೆ ಹಾಗೂ ವಿವಿಧ ಅಧಿಕಾರಿಗಳೊಂದಿಗೆ ಕುಂದು ಕೊರತೆಗಳನ್ನು ಆಲಿಸಿ ಸಂಜೆ 4.30ಕ್ಕೆ ಜಿಲ್ಲೆಯಿಂದ ನಿರ್ಗಮಿಸಿ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಅಧ್ಯಕ್ಷರ ಆಪ್ತ ಕಾರ್ಯದರ್ಶಿಗಳಾದ ಬಿ.ಎಸ್.ಸುಹಾಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉನ್ನತ ಶಿಕ್ಷಣ ಅವಕಾಶ: ಬೆಂಗಳೂರಿನಲ್ಲಿ ಆಗಸ್ಟ್ 17ರಂದು ಮಾಹಿತಿ ಕಾರ್ಯಗಾರ

**ರಾಯಚೂರು,ಆ.13–**ವಿದೇಶದಲ್ಲಿ ವಿದ್ಯಾಭ್ಯಾಸ ಮಾಡಲು ಇಚ್ಛಿಸುವ ರಾಜ್ಯದ ವಿದ್ಯಾರ್ಥಿಗಳಿಗೆ ಜಾಗತಿಕ ಉನ್ನತ ಶಿಕ್ಷಣದ ಅವಕಾಶವನ್ನು ಪರಿಚಯಿಸುವ ಉದ್ದೇಶದಿಂದ ಸ್ಟಡಿ ಅಬ್ರಾಡ್ –2025 ಕಾರ್ಯಕ್ರಮವನ್ನು ವಿದ್ಯಾರ್ಥಿಗಳಿಗಾಗಿ ಕರ್ನಾಟಕ ವೃತ್ತಿಪರ ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಬೆಂಗಳೂರಿನ ಕುಮಾರ ಕೃಪಾ ರಸ್ತೆಯ ಲಲಿತ್ ಅಶೋಕ್ ಹೋಟೆಲ್‌ನಲ್ಲಿ ಆಗಸ್ಟ್ 17ರ ಬೆಳಿಗ್ಗೆ 10 ರಿಂದ 5 ಗಂಟೆಯವರೆಗೆ ನಡೆಯಲಿದೆ.

ಕಾರ್ಯಕ್ರಮದಲ್ಲಿ 10ಕ್ಕೂ ಹೆಚ್ಚು ವಿದೇಶಗಳ 60 ವಿಶ್ವವಿದ್ಯಾನಿಲಯಗಳು ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದು, ಉನ್ನತ ಶಿಕ್ಷಣಕ್ಕಾಗಿ ವಿದೇಶಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ವಯಕ್ತಿಕ ಸಮಾಲೋಚನೆ, ಅರ್ಜಿ ಸಲ್ಲಿಕೆ ಮತ್ತು ದಾಖಲಾತಿಯ ಬಗ್ಗೆ ವಿವರಣೆ, ಅಧ್ಯಯನದ ಅವಕಾಶಗಳು, ಹಣಕಾಸು ವ್ಯವಸ್ಥೆ ಮತ್ತು ಆರೋಗ್ಯ ವಿಮೆ ಕುರಿತ ಮಾಹಿತಿ, ವಿದೇಶಕ್ಕೆ ಪ್ರಯಾಣ ಬೆಳೆಸುವ ಅರ್ಹ ವಿದ್ಯಾರ್ಥಿಗಳಿಗೆ ಉಚಿತ ವಿಮಾನ ಟಿಕೆಟ್ ಸೌಲಭ್ಯ, ಪ್ರವೇಶ ಪ್ರಕ್ರಿಯೆ, ವಿದ್ಯಾರ್ಥಿ ವೀಸಾ ಮಾಹಿತಿ ಮತ್ತು ವಿದ್ಯಾರ್ಥಿ ವೇತನದ ಬಗ್ಗೆ ಒಂದೇ ವೇದಿಕೆಯಡಿ ಮಾಹಿತಿಯನ್ನು ಒದಗಿಸುವ ಅವಕಾಶವನ್ನು ಕಲ್ಪಿಸಲಾಗಿರುತ್ತದೆ.

ವಿದೇಶದಲ್ಲಿ ಅಧ್ಯಯನ ಮಾಡಲು ಇಚ್ಛಿಸುವ ಜಿಲ್ಲೆಯ ಪ್ರತಿಭಾವಂತ ಅರ್ಹ ಯುವಕ ಹಾಗೂ ಯುವತಿಯರು ಸ್ಟಡಿ ಅಬ್ರಾಡ್ (ವಿದೇಶದಲ್ಲಿ ಅಧ್ಯಯನ)–2025 ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತಿಯುಳ್ಳ ವಿದ್ಯಾರ್ಥಿಗಳು ಆಗಸ್ಟ್ 16ರೊಳಗಾಗಿ ವೆಬ್‌ಸೈಟ್ ವಿಳಾಸ: https://studyabroad.ksdckarnataka.com ನಲ್ಲಿ ನೋಂದಾಯಿಸಿಕೊಂಡು ಬೆಂಗಳೂರುನಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಸದುಪಯೋಗ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9986332736ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳಾದ ಜಿ.ಯು.ಹುಡೇದ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಾಸಕ ಬಸವನಗೌಡ ಪಾಟೀಲ ಯತ್ನಾಳ್ ವಿರುದ್ಧ ಪ್ರಕರಣ

**ಕಲಬುರಗಿ,ಆ.13–**ವಿಜಯಪುರ ನಗರ ಶಾಸಕ ಬಸವನಗೌಡ ಪಾಟೀಲ ಯತ್ನಾಳ್ ಅವರ ವಿರುದ್ಧ ಇಲ್ಲಿನ ರೋಜಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.ಖಿದ್ಮತ್ ಎ ಮಿಲ್ಲತ್ ಕಮಿಟಿ ಅಧ್ಯಕ್ಷ ಖಮರ್ ಜುನೈದ್ ಖುರೇಶಿ ಅವರು ನೀಡಿದ ದೂರಿನ ಮೇರೆಗೆ ಯತ್ನಾಳ್ ವಿರುದ್ಧ ಪ್ರಕರಣ ದಾಖಲಾಗಿದೆ."ಹಿಂದೂ ಹುಡುಗರು ಮುಸ್ಲಿಂ ಹುಡುಗಿಯರನ್ನು ಮದುವೆಯಾದರೆ 5 ಲಕ್ಷ ರೂ.ನಗದು ಪ್ರೋತ್ಸಾಹ ಧನ ನೀಡಲಾಗುವುದು" ಎಂದು ವಿಜಯಪುರ ನಗರ ಶಾಸಕ ಬಸವನಗೌಡ ಪಾಟೀಲ ಯತ್ನಾಳ್ ಅವರು ಕೊಪ್ಪಳದಲ್ಲಿ ಬಹಿರಂಗ ಹೇಳಿಕೆ ನೀಡುವುದರ ಮೂಲಕ ಒಂದು ಸಮುದಾಯವನ್ನು ಗುರಿಯಾಗಿಸಲು ಮತ್ತು ಇನ್ನೊಂದು ಸಮುದಾಯವನ್ನು ಪ್ರಚೋದಿಸಲು ಉದ್ದೇಶಿಸಿದ್ದು ಸ್ಪಷ್ಟವಾಗಿದೆ. ಇದು ಹಲವಾರು ಕಡೆಗಳಲ್ಲಿ ಗಂಭೀರ ಕಾನೂನು ಸುವ್ಯವಸ್ಥೆಗೆ ಕಾರಣವಾಗಬಹುದಾಗಿದೆ. ಅಲ್ಲದೆ ಯತ್ನಾಳ್ ಅವರು ಈ ಹಿಂದೆಯೂ ಸಮುದಾಯಗಳನ್ನು ವಿಭಜಿಸುವ, ಒಂದು ನಿರ್ಧಿಷ್ಟ ಧಾರ್ಮಿಕ ಗುಂಪನ್ನು ಗುರಿಯಾಗಿಸುವ ಕೆಲಸ ಮಾಡುತ್ತಿದ್ದಾರೆ ಎಂದು ದೂರಿನಲ್ಲಿ ತಿಳಿಸಿದ್ದಾರೆ.

# ಮಾನ್ವಿ ಬಿಜೆಪಿಯಿಂದ ಹರ್ ಘರ್ ತಿರಂಗಾ ಅಭಿಯಾನ ಅಂಗವಾಗಿ ಬೈಕ್ ರ್‍ಯಾಲಿ

ಯುವ ಮಾರ್ಗ ಸುದ್ದಿ

**ಮಾನ್ವಿ.:** ಬಿಜೆಪಿ ಮಂಡಲ ಹಾಗೂ ಬಿಜೆಪಿ ಯುವ ಮೋರ್ಚಾ ವತಿಯಿಂದ 78 ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಹರ್ ಹರ್ ಘರ್ ತಿರಂಗಾ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿತ್ತು.

ಈ ವೇಳೆ ಮಾಜಿ ಶಾಸಕ ಗಂಗಾಧರ ನಾಯಕ ಮಾತನಾಡಿ ಆಗಸ್ಟ್ 15 ರಂದು ಪ್ರತಿಯೊಬ್ಬ ನಾಗರೀಕರೂ ತಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜವನ್ನು ಹಾರಿಸುವ ಮೂಲಕ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಭಾಗವಹಿಸಬೇಕೆಂದು ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದು ಈ ಹಿನ್ನಲೆಯಲ್ಲಿ ನಾವೆಲ್ಲರೂ ನಮ್ಮ ಮನೆಗಳ ಮೇಲೆ ರಾಷ್ಟ್ರಧ್ವಜ ಹಾರಿಸೋಣ.

ಈ ಮೊದಲು ಶಾಲಾ ಕಾಲೇಜು ಮತ್ತು ಸರ್ಕಾರಿ ಕಚೇರಿಗಳಲ್ಲಿ ಮಾತ್ರ ಧ್ವಜ ಹಾರಿಸುತ್ತಿದ್ದರು. ಈಗ ಪ್ರತಿಯೊಬ್ಬರ ಮನೆ ಮೇಲೂ ತ್ರಿವರ್ಣ ಧ್ವಜ ರಾರಾಜಿಸಬೇಕು. ದೇಶಕ್ಕಾಗಿ ಮತ್ತು ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನು ಲೆಕ್ಕಿಸದೆ ವೀರ ಮರಣವನ್ನು ಹೊಂದಿದ ದೇಶಭಕ್ತರಿಗೆ ಹಾಗೂ ಸೈನಿಕರಿಗೆ ಗೌರವ ನೀಡಬೇಕು. ಅವರ ತ್ಯಾಗ ಬಲಿದಾನವನ್ನು ನೆನಪು ಮಾಡಿಕೊಳ್ಳಬೇಕೆಂಬ ಉದ್ದೇಶದೊಂದಿಗೆ ಈ ಯಾತ್ರೆ ಮಾಡಲಾಗುತ್ತಿದೆ ಎಂದರು.

ಜಮ್ಮು ಕಾಶ್ಮೀರದಲ್ಲಿ ಕಲಂ 370ನ್ನು ತೆಗೆದರೆ ರಕ್ತದೋಕುಳಿ ಹರಿಯುತ್ತದೆ ಎಂದು ಕಾಂಗ್ರೆಸ್ ಲೇವಡಿ ಮಾಡಿತ್ತು. ಒಂದು ಚುಕ್ಕೆ ರಕ್ತ ಹರಿಯದೆ ಜಾರಿಗೆ ತರಲಾಯಿತು. ಪಹಲ್ಗಾಂನಲ್ಲಿ ಉಗ್ರರ ಅಟ್ಟಹಾಸವನ್ನು ಮಟ್ಟ ಹಾಕಲಾಯಿತು. ಇದು ಆಧುನಿಕ ಭಾರತ. ಯಾವುದೇ ವಿದೇಶಿ ಶಕ್ತಿಗಳು ನಮ್ಮ ಮೇಲೆ ಆಕ್ರಮಣ ಮಾಡಲು ಭಯ ಪಡುವಂತಾಗಿದೆ ಎಂದರು.

ಬ್ರಿಟಿಷರಿಂದ ಬಳುವಳಿಯಾಗಿ ಬಂದಿರುವ ಪಕ್ಷಗಳು ಜಾತಿ ಜಾತಿಗಳ ಮಧ್ಯೆ ವಿಷಬೀಜ ಬಿತ್ತುತ್ತಿದೆ. ದೇಶದಲ್ಲಿ ಯಾವುದೇ ಕಷ್ಟಕರ ಸಂದರ್ಭದಲ್ಲಿ ಪಕ್ಷವನ್ನು ಮರೆತು ದೇಶ ಮೊದಲು ಎಂದು ಕಾರ್ಯಪ್ರವೃತ್ತರಾಗುತ್ತೇವೆ ಎಂದು ಹೇಳಿದರು.

ಟಿಎಪಿಸಿಎಂಎಸ್ ಅಧ್ಯಕ್ಷ ಎಸ್.ತಿಮ್ಮಾರೆಡ್ಡಿ ಭೋಗಾವತಿ ಮಾತನಾಡಿ, ಬಡವರಾಗಲಿ, ಶ್ರೀಮಂತರಾಗಲಿ ಎಲ್ಲರಿಗೂ ರಾಷ್ಟ್ರ ಒಂದೇ. ಎಲ್ಲರಲ್ಲೂ ದೇಶಭಕ್ತಿ ಇರಬೇಕು. ದೇಶಕ್ಕಾಗಿ ಪ್ರಾಣಾರ್ಪಣೆ ಮಾಡಿದವರನ್ನು ಸ್ಮರಿಸಬೇಕು. ದೇಶದ ಬಗ್ಗೆ ಯಾವುದೇ ಪಕ್ಷದವರು ಕರೆಕೊಟ್ಟರು ನಾವು ಹೋಗಬೇಕು. ನಮ್ಮ ತಾಯಿ ಮತ್ತು ದೇಶ ಹಾಗೂ ಸಂಸ್ಕೃತಿಯನ್ನು ಮರೆತರೆ ದೇಶವು ನಾಶದ ಕಡೆ ಹೋಗುತ್ತದೆ ಎಂದರು.

ನಮ್ಮ ದೇಶ ಶಾಂತಿಪ್ರಿಯ ದೇಶವಾಗಿದೆ. ಯಾವುದೇ ಪಕ್ಷ, ಜಾತಿ, ಧರ್ಮ ನೋಡದೆ ದೇಶ ಎಂದು ಬಂದಾಗ ಎಲ್ಲರೂ ಒಂದಾಗಬೇಕು. ಹತ್ತು ವರ್ಷ ಬದುಕುವ ಬದಲು ಮೂರು ವರ್ಷ ಸಿಂಹಗಳಾಗಿ ಬದುಕಿದರೆ ಸಾಕು ಎಂದರು.



ಬಿಜೆಪಿ ಮಾನ್ವಿ ಮಂಡಲ ಅಧ್ಯಕ್ಷ ವೀರಭದ್ರಗೌಡ ಭೋಗಾವತಿ ಮಾತನಾಡಿ ದೇಶದ ಸ್ವಾತಂತ್ರ್ಯಕ್ಕಾಗಿ ಅನೇಕ ಮಹನೀಯರು ತಮ್ಮ ಜೀವನವನ್ನೇ ಮುಡುಪಾಗಿರಿಸಿದ್ದರು. ಕಠಿಣ ಜೈಲು ಶಿಕ್ಷೆ ಅನುಭವಿಸಿದರು. ಅವರೆಲ್ಲರ ತ್ಯಾಗದ ಫಲವಾಗಿ ಇಂದು ನಾವು ಸ್ವಾತಂತ್ರ್ಯ ಅನುಭವಿಸುತ್ತಿದ್ದೇವೆ, ದೇಶಭಕ್ತಿ ಎನ್ನುವುದು ನಮ್ಮ ಉಸಿರಾಗಬೇಕು, ದೇಶಭಕ್ತಿ ಜಾಗೃತಿಗಾಗಿ ಹರ್ ಹರ್ ಘರ್ ತಿರಂಗಾ ಕಾರ್ಯಕ್ರಮ ಭಾರತೀಯರ ಮನ ಗೆದ್ದಿದೆ ಎಂದರು.

**ರ್‍ಯಾಲಿ :** ಸ್ವಾತಂತ್ರ್ಯೋತ್ಸವ ಹಿನ್ನೆಲೆಯಲ್ಲಿ ನಗರದಲ್ಲಿ ಬಿಜೆಪಿ ಕಾರ್ಯಕರ್ತರಿಂದ ಹರ್ ಘರ್ ತಿರಂಗಾ ಯಾತ್ರೆ ಪ್ರಯುಕ್ತ ಬೈಕ್ ರ್‍ಯಾಲಿ ನಡೆಸಿದರು. ಬಿಜೆಪಿಯ ನೂರಾರು ಕಾರ್ಯಕರ್ತರು ಕೈಯಲ್ಲಿ ತ್ರಿವರ್ಣ ಧ್ವಜ ಹಿಡಿದು ಭಾರತ ಮಾತಾ ಕೀ ಜೈ, ವಂದೇ ಮಾತರಂ ಘೋಷಣೆಗಳನ್ನು ಮೊಳಗಿಸಿದರು. ಪಟ್ಟಣದ ಬಸವವೃತ್ತದಿಂದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಮೂಲಕ ಕೋನಾಪುರಪೇಟೆ, ಟಿಪ್ಪುಸುಲ್ತಾನ ವೃತ್ತ, ಬಸ್ ನಿಲ್ದಾಣ, ವಾಲ್ಮೀಕಿ ವೃತ್ತದಿಂದ ಧ್ಯಾನಮಂದಿರವರಗೆ ತೆರಳಿ ನಂತರ ಮಾಜಿಸಂಸದ ಬಿ.ವಿ.ನಾಯಕ ಮನೆ ಮೇಲೆ ರಾಷ್ಟ್ರಧ್ವಜ ಹಾರಿಸಲಾಯಿತು.

ಈ ರ್‍ಯಾಲಿಯಲ್ಲಿ ಮಾಜಿಶಾಸಕ ಗಂಗಾಧರನಾಯಕ, ಬಿಜೆಪಿ ಮಾನ್ವಿ ಮಂಡಲ ಅಧ್ಯಕ್ಷ ವೀರಭದ್ರಗೌಡ ಭೋಗಾವತಿ, ಸಿರವಾರ ಮಂಡಲ ಅಧ್ಯಕ್ಷ ವೈ.ಸುರೇಶಗೌಡ ಬಲ್ಲಟಗಿ, ಎಸ್.ತಿಮ್ಮಾರೆಡ್ಡಿ ಭೋಗಾವತಿ, ಶರಣಪ್ಪಗೌಡ ನಕ್ಕುಂದಿ, ಉಮೇಶ ಸಜ್ಜನ್, ಜಗದೀಶ್ ಓತೂರು, ಯುವ ಮೋರ್ಚಾ ಅಧ್ಯಕ್ಷ ರವಿಗೌಡ ಆಲ್ದಾಳ, ಮಲ್ಲನಗೌಡ ನಕ್ಕುಂದಿ, ವೀರನಗೌಡ ವಕೀಲ, ಸಾಮಾಜಿಕ ಜಾಲತಾಣದ ಸಂಚಾಲಕ ಸದ್ದಾಂಹುಸೇನ್, ಅಯ್ಯಪ್ಪನಾಯಕ ಮ್ಯಾಕಲ್, ಉಮಾಕಾಂತ ಸಾಹುಕಾರ, ಗುರುಗೌಡ ಕಣ್ಣೂರು, ಹನುಮೇಶನಾಯಕ, ರುದ್ರಗೌಡ ಮದ್ಲಾಪುರು, ಜಯರಾಜ್ ಬಾದರದಿನ್ನಿ, ಮಲ್ಲಿಕಾರ್ಜುನಗೌಡ ಸಂಗಾಪುರು, ವಿರೇಶನಾಯಕ ಬೆಟ್ಟದೂರು, ಶರಣಯ್ಯಸ್ವಾಮಿ, ಕೆ.ನಾಗಲಿಂಗಸ್ವಾಮಿ, ಅನುರಾಧಾ ಸೂಗಪ್ಪಗೌಡ, ವಿಶ್ವನಾಥ ವಕೀಲ, ಶಿವಕುಮಾರಸ್ವಾಮಿ ಗವಿಗಟ್, ವಿರೂಪಾಕ್ಷಗೌಡ ಪೋತ್ನಾಳ, ಚಂದ್ರು ಜಾನೇಕಲ್, ಹನುಮೇಶನಾಯಕ ಸಾದಾಪುರು, ಚಂದ್ರುನಾಯಕ, ಬಾಬುಲಾಲ್ ರಾಜಪುರೋಹಿತ್, ಶಿವಲಿಂಗಯ್ಯಸ್ವಾಮಿ, ಶಿವಕುಮಾರ, ಕೆ.ವೆಂಕಟೇಶ, ಮಂಜುನಾಥನಾಯಕ ಜಾನೇಕಲ್, ಈರಣ್ಣನಾಯಕ ಕೊಟ್ನೆಕಲ್ ಸೇರಿದಂತೆ ಅನೇಕ ನಾಯಕರು, ಕಾರ್ಯಕರ್ತರು ಭಾಗವಹಿಸಿದ್ದರು.

# ಅರೋಲಿಯಲ್ಲಿ ಮಾದಕ ದ್ರವ್ಯ ಮುಕ್ತ ಕರ್ನಾಟಕ ಅಭಿಯಾನ

ಯುವ ಮಾರ್ಗ ಸುದ್ದಿ

**ರಾಯಚೂರು,ಆ.13–**ಸಮಾಜದ ಪ್ರತಿಯೊಬ್ಬರು ಮಾದಕ ವಸ್ತುಗಳ ದುಷ್ಪರಿಣಾಮ ಅರಿತು ಮಾದಕ ದ್ರವ್ಯ ಮುಕ್ತ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಅರೋಲಿ ಗ್ರಾಮ ಪಂಚಾಯಿತಿ ಅಭಿ ವೃದ್ಧಿ ಅಧಿಕಾರಿ ಚೌಡಯ್ಯ ನಾಯಕ ಅವರು ಹೇಳಿದರು.

ಬುಧವಾರ ದಂದು ಜಿಲ್ಲೆಯ ಅರೋಲಿ ಗ್ರಾಮದ ಲ್ಲಿರುವ ಹುಲಿಗೆಮ್ಮ ಸಂಜೀ ವಿನಿ ಗ್ರಾಮ ಪಂಚಾಯಿತಿ ಒಕ್ಕೂಟದ ಕಚೇರಿಯಲ್ಲಿ ಜಿಲ್ಲಾ ಪಂಚಾಯತ್ ರಾಯಚೂರು, ತಾಲೂಕು ಪಂಚಾಯಿತಿ ಮಾ ನವಿ, ಗ್ರಾಮ ಪಂಚಾಯಿತಿ ಅರೋಲಿ, ಸಂಜೀವಿನಿ ಕರ್ನಾ ಟಕ ರಾಜ್ಯ ಗ್ರಾಮೀಣ ಜೀವ ನೋಪಾಯ ಅಭಿಯಾನ, ಹುಲಿಗೆಮ್ಮ ದೇವಿ ಸಂಜೀವಿನಿ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಮಾದಕ ದ್ರವ್ಯ ಮುಕ್ತ ಕರ್ನಾಟಕ ಅಭಿಯಾನದ ಪೋಸ್ಟರ್ ಬಿಡುಗಡೆ ಮಾಡಿ ಅವರು ಮಾತನಾಡಿದರು.



ಮಾದಕ ದ್ರವ್ಯ ಬಳಕೆ ಮತ್ತು ವ್ಯಸನದಿಂದ ಉಂಟಾಗುವ ಹಿಂಸೆ, ದೌರ್ಜನ್ಯ ಮತ್ತು ಸಾಮಾಜಿಕ ಸಮಸ್ಯೆಗಳ ಬಗ್ಗೆ ಸಮಗ್ರ ಜಾಗೃತಿ ಮೂಡಿಸಲಾಗುತ್ತದೆ. ಮಾದಕ ದ್ರವ್ಯ ಬಳಕೆ ಮಾಡುವುದರಿಂದ ಜೀವನ ನಾಶವಾಗುವುದು ಎಂದು ತಿಳಿಸಿದರು.

ಎನ್.ಆರ್.ಎಲ್.ಎಮ್ ವಲಯ ಮೇಲ್ವಿಚಾರಕರಾದ ಶರಣು ಬಸವ ಅವರು ಮಾತನಾಡಿ, ಮಾನವನ ಆರೋಗ್ಯಕ್ಕೆ ಮಾರಕವಾಗಿರುವಂತಹ ಗಾಂಜಾ, ಅಫೀಮ್ ದಂತಹ ಮಾದಕ ದ್ರವ್ಯಗಳಿಂದ ದೂರವಿರಬೇಕು. ತಮ್ಮ ಸುತ್ತಲಿನ ಪರಿಸರದಲ್ಲಿ ಮಾದಕ ದ್ರವ್ಯ ಸೇವಿಸದಂತೆ ಶ್ರಮ ವಹಿಸಬೇಕು. ಅಂದಾಗ ಮಾದಕ ವ್ಯಸನ ಮುಕ್ತವಾದ ಕರ್ನಾಟಕ ನಿರ್ಮಾಣ ಮಾಡಲು ಸಾಧ್ಯವಿದೆ. ಸಮಾಜದ ಪ್ರತಿಯೊಬ್ಬ ಸದಸ್ಯರು ಮಾದಕ ವಸ್ತುಗಳ ಕೆಟ್ಟ ಪರಿಣಾಮ ಹಾಗೂ ವ್ಯಸನಕ್ಕೆ ಸಂಬಂಧಿಸಿದ ಸಮಸ್ಯೆಗಳು ಮತ್ತು ಋಣಾತ್ಮಕ ಪರಿಣಾಮಗಳನ್ನು ಅರ್ಥಮಾಡಿಕೊಳ್ಳಬೇಕು. ಇಂತಹ ದುಶ್ಚಟಗಳಿಗೆ ಬಲಿಯಾಗದೆ ಉತ್ತಮ ಜೀವನ ನಡೆಸಬೇಕೆಂದರು.

ಇದೇ ವೇಳೆ ಮಾದಕ ಮುಕ್ತ ಕರ್ನಾಟಕ ನಿರ್ಮಾಣ ಮಾಡಲು ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ವೀರಾರೆಡ್ಡಿ, ಎನ್.ಆರ್.ಎಲ್.ಎಮ್. ವಲಯ ಮೇಲ್ವಿಚಾರಕರಾದ ಸೂರತ್ ಪ್ರಸಾದ್ ಗಟ್ಟು, ತಾಲೂಕು ಸಂಪನ್ಮೂಲ ವ್ಯಕ್ತಿಗಳಾದ ರುದ್ರಮ್ಮ, ಚನ್ನಬಸ್ಸಮ್ಮ, ಒಕ್ಕೂಟದ ಅಧ್ಯಕ್ಷ ಶಿವಮ್ಮ, ಕಾರ್ಯದರ್ಶಿ ಪಾರ್ವತಿ, ಖಜಾಂಚಿ ಕಲಾವತಿ, ಎಂಬಿಕೆ ಮಹಿಬೂಬಿ, ಎಲ್.ಸಿ.ಆರ್.ಪಿ. ಮಲ್ಲಿಕಾ, ಕೃಷಿ ಸಖಿ ಅಂಬಿಕಾ, ಗ್ರಾಮ ಪಂಚಾಯಿತಿ ಸಿಬ್ಬಂದಿ ಜಗದೀಶ್, ಬಸವರಾಜ, ಅಂಗನವಾಡಿ ಶಿಕ್ಷಕಿ ರೇಣುಕಾ ಮತ್ತು ಸ್ವ ಸಹಾಯ ಗುಂಪಿನ ಮಹಿಳೆಯರು ಹಾಜರಿದ್ದರು.

# ಮಟಕಾ: ಬಂಧನ

**ಕಲಬುರಗಿ,ಆ.13–**ಇಲ್ಲಿನ ರಾಘವೇಂದ್ರ ನಗರ ಪೊಲೀಸ್ ಠಾಣೆ ವ್ಯಾಪ್ತಿಯ ಡಬರಾಬಾದ ಕ್ರಾಸ್ ಹತ್ತಿರದ ಸಾರ್ವಜನಿಕ ರಸ್ತೆಯ ಮೇಲೆ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ಮೃತ್ಯುಂಜಯ, ಅಶೋಕ ಕಟಕೆ, ಯಲ್ಲಪ್ಪ, ಶಿವಕುಮಾರ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ ನಾಗರಾಜ ತಂದೆ ಚಿದಾನಂದ ಕಲಶೆಟ್ಟಿ (36) ಎಂಬಾತನನ್ನು ಬಂಧಿಸಿ 4,400 ರೂ.ನಗದು, ಮಟಕಾ ಚೀಟಿ ಮತ್ತು ಒಂದು ಬಾಲ್ ಪೆನ್ ಜಪ್ತಿ ಮಾಡಿದ್ದಾರೆ. ಆರ್.ಜಿ.ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಿರವಾರ: ಅತಿಥಿ ಉಪನ್ಯಾಸಕರ ನೇಮಕಾತಿಗೆ ಅರ್ಜಿ ಆಹಾನ

**ರಾಯಚೂರು,ಆ.13–** ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿರವಾರ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಮತ್ತು ಪದವಿ ಪೂರ್ವ ವಿಜ್ಞಾನ ವಸತಿ ಕಾಲೇಜಿನಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅರ್ಹ ಅತಿಥಿ ಉಪನ್ಯಾಸಕರನ್ನು ನೇಮಕಾತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಂಸ್ಥೆಯಲ್ಲಿ ಭೌತಶಾಸ್ತ್ರ ಉಪನ್ಯಾಸಕರ 01 ಹುದ್ದೆಗೆ ಎಂ.ಎಸ್ಸಿ ಭೌತಶಾಸ್ತ್ರ ಹಾಗೂ ಬಿ.ಎಡ್., ರಸಾಯನಶಾಸ್ತ್ರ ಉಪನ್ಯಾಸಕರ 01 ಹುದ್ದೆಗೆ ಎಂ.ಎಸ್ಸಿ ರಸಾಯನಶಾಸ್ತ್ರ ಹಾಗೂ ಬಿ.ಎಡ್., ಗಣಿತ ಉಪನ್ಯಾಸಕರ 01 ಹುದ್ದೆಗೆ ಎಂ.ಎಸ್ಸಿ ಗಣಿತ ಹಾಗೂ ಬಿ.ಎಡ್., ಜೀವಶಾಸ್ತ್ರ ಉಪನ್ಯಾಸಕರ 01 ಹುದ್ದೆಗೆ ಎಂ.ಎಸ್ಸಿ ಸಸ್ಯಶಾಸ್ತ್ರ/ಪ್ರಾಣಿಶಾಸ್ತ್ರ ಹಾಗೂ ಬಿ.ಎಡ್., ಕನ್ನಡ ಭಾಷಾ ಉಪನ್ಯಾಸಕರ 01 ಹುದ್ದೆಗೆ ಎಂ.ಎ ಕನ್ನಡ ಹಾಗೂ ಬಿ.ಎಡ್, ಆಂಗ್ಲ ಭಾಷಾ ಉಪನ್ಯಾಸಕರ 01 ಹುದ್ದೆಗೆ ಎಂ.ಎ ಇಂಗ್ಲಿಷ್ ಹಾಗೂ ಬಿ.ಎಡ್ ಪದವಿ ಪಡೆದಿರಬೇಕು.

ಅರ್ಜಿ ಸಲ್ಲಿಸಲು ಇಚ್ಛಸುವ ಅಭ್ಯರ್ಥಿಗಳು ಆಗಸ್ಟ್ 18ರ ಸಂಜೆ 4.30 ರೊಳಗೆ ಪ್ರಾಂಶುಪಾಲರು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಅಥವಾ ವಸತಿ ಕಾಲೇಜು ಸಿರವಾರ (ಪ.ಪಂ–496) ಇವರಿಗೆ ಎಲ್ಲಾ ದೃಢೀಕೃತ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಪ್ರಾತ್ಯಕ್ಷಿಕೆ ತರಗತಿ (ಡೆಮೋಕ್ಲಾಸ್)ಗೆ ಹಾಜರಾಗಬೇಕು. ಅಲ್ಲದೆ ಅನುಭವ ಹೊಂದಿದವರಿಗೆ ಮೊದಲ ಆದ್ಯತೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ ಅಥವಾ ವಸತಿ ಕಾಲೇಜು ಸಿರವಾರ (ಪ.ಪಂ–496) ದೂರವಾಣಿ ಸಂಖ್ಯೆ: 9901866601ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರ ಜಿಲ್ಲೆಗೆ ರಸಗೊಬ್ಬರ ಬರುತ್ತಿದೆ: ಪ್ರಕಾಶ ಚವ್ಹಾಣ್

**ರಾಯಚೂರು,ಆ.13–**2025–26 ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಗೆ ನಿಗದಿಪಡಿಸಿದ ಗುರಿಯಂತೆ ಯೂರಿಯಾ ರಸಗೊಬ್ಬರ ಜಿಲ್ಲೆಗೆ ಬರುತ್ತಿದ್ದು, ರಸಗೊಬ್ಬರದ ಕೊರತೆ ಬಗ್ಗೆ ರೈತರು ಆತಂಕಪಡುವ ಅವಶ್ಯಕತೆ ಇರುವುದಿಲ್ಲ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ್ ಚೌಹಾಣ್ ಅವರು ತಿಳಿಸಿದ್ದಾರೆ.

ಆರ್‌ಎಪಿಸಿಎಮ್‌ಎಸ್ ರಾಯಚೂರು–36, ಪಿಎಸಿಎಸ್ ದೇವಸುಗೂರು–18, ಪಿಎಸಿಎಸ್ ದಿನ್ನಿ–9, ಪಿಎಸಿಎಸ್ ತಲಮಾರಿ–18, ಒಜಿಜಿಎಸ್ ಕಲ್ಮಲಾ–9, ಪಿಎಸಿಎಸ್ ಗಾಣಧಾಳ–9, ಬೃಂದಾವನ ಎಫ್‌ಪಿಒ–9, ಪಿಎಸಿಎಸ್ ಹೊಸೂರು–18, ಪಿಎಸಿಎಸ್ ಕುರ್ಡಿ–18, ಪಿಎಸಿಎಸ್ ಹರವಿ–9, ಪಿಎಸಿಎಸ್ ಚೀಕಲಪರ್ವಿ–9, ಪಿಎಸಿಎಸ್ ಹೀರೆಕೊಟ್ರೇಕಲ್–9, ಪರಿಶ್ರಮ ಎಫ್‌ಪಿಒ–18, ಒಜಿಜಿಎಸ್ ಅರಕೇರಾ–18, ಕಲ್ಪವೃಕ್ಷ ಎಫ್‌ಪಿಒ –18, ಟಿಎಪಿಸಿಎಮ್‌ಎಸ್ ದೇವದುರ್ಗ–18, ಪಿಎಸಿಎಸ್ ಹುಡಾ–18, ಪಿಎಸಿಎಸ್ ಹಂಚಿನಾಳ ಕ್ಯಾಂಪ–18 ಮೆಟ್ರಿಕ್ ಟನ್ ಯೂರಿಯಾ ಗೊಬ್ಬರವನ್ನು ರೈತರಿಗೆ ವಿತರಿಸಲಾಗಿದೆ.

ಪಿಎಸಿಎಸ್ ದೇವಸುಗೂರು–18 ಪಿಎಸಿಎಸ್ ದಿನ್ನಿ–9, ಪಿಎಸಿಎಸ್ ತಲಮಾರಿ–18 ಒಜಿಜಿಎಸ್ ಕಲ್ಮಲಾ–9 ಪಿಎಸಿಎಸ್ ಗಾಣಧಾಳ–9, ಬೃಂದಾವನ ಎಫ್‌ಪಿಒ–9, ಪಿಎಸಿಎಸ್ ಕುರ್ಡಿ–18, ಪಿಎಸಿಎಸ್ ಹರವಿ–9, ಪಿಎಸಿಎಸ್ ಚೀಕಲಪರ್ವಿ–9, ಪಿಎಸಿಎಸ್ ಹೀರೆಕೊಟ್ರೇಕಲ್–18, ಪರಿಶ್ರಮ ಎಫ್‌ಪಿಒ–18, ಒಜಿಜಿಎಸ್ ಅರಕೇರಾ–18, ಕಲ್ಪವೃಕ್ಷ ಎಫ್‌ಪಿಒ–18, ಪಿಎಸಿಎಸ್ ಗೋನಾವರ–18, ಟಿಎಪಿಸಿಎಮ್‌ಎಸ್ ಸಿಂಧನೂರು–18, ಪಿಎಸಿಎಸ್ ಜವಳಗೇರಾ– 18, ಪಿಎಸಿಎಸ್ ಸಿಂಧನೂರು–18, ಸುಭಿಕ್ಷ ಎಫ್‌ಪಿಒಗೆ 18 ಮೆಟ್ರಿಕ್ ಟನ್ ಡಿ.ಎ.ಪಿ ಗೊಬ್ಬರವನ್ನು ರೈತರಿಗೆ ವಿತರಿಸಲಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಗ್ನಿವೀರ್ ಸೇನಾ ಭರ್ತಿ: 6ನೇ ದಿನಕ್ಕೆ 779 ಅಭ್ಯರ್ಥಿಗಳು ಭಾಗಿ

**ರಾಯಚೂದು,ಆ.13–**ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದಲ್ಲಿ ಆಯೋಜನೆ ಮಾಡಿದ ಅಗ್ನಿವೀರ್ ಸೇನಾ ಭರ್ತಿಗೆ 6ನೇ ದಿನವಾದ ಆಗಸ್ಟ್ 13ರಂದು ಒಟ್ಟು 779 ಅಭ್ಯರ್ಥಿಗಳು ವರದಿ ಮಾಡಿಕೊಂಡರು.

ಈ ಪೈಕಿ, 1600 ಮೀಟರ್ ಓಟದ ಸ್ಪರ್ಧೆಯಲ್ಲಿ 492 ಅಭ್ಯರ್ಥಿಗಳು ತೇರ್ಗಡೆಯಾಗಿ ಮುಂದಿನ ವೈದ್ಯಕೀಯ ಪರೀಕ್ಷೆಗೆ ಪ್ರವೇಶ ಪಡೆದುಕೊಂಡರು.

ಮಳೆಯಿಂದ ಮೈದಾನ ಕೆಸರು: ಆಗಸ್ಟ್ 12ರಂದು ರಾತ್ರಿ ವೇಳೆಯಲ್ಲಿ ಜಿಟಿಜಿಟಿ ಮಳೆಯು ನಿರಂತರ ಸುರಿದ ಪರಿಣಾಮ ಆಗಸ್ಟ್ 13ರಂದು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣವು ಕೇಸರಿನಿಂದ ಆವೃತವಾಗಿದ್ದು ಕಂಡು ಬಂದಿತು.

ಆಗಸ್ಟ್ 14ರಂದು ಬೆಳಗಾವಿ ಅಭ್ಯರ್ಥಿಗಳು: ವೇಳಾಪಟ್ಟಿಯಂತೆ ಆಗಸ್ಟ್ 14ರಂದು ಬೆಳಗಾವಿ ಜಿಲ್ಲೆಯಿಂದ ಅಂದಾಜು 860 ಅಭ್ಯರ್ಥಿಗಳು ಸೇನಾ ಭರ್ತಿಗೆ ವರದಿ ಮಾಡಿಕೊಳ್ಳಲಿದ್ದಾರೆ ಎಂದು ಸೇನಾಧಿಕಾರಿಗಳು ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H